ಸಂಪುಟ : 8 ಸಂಚಿಕೆ 310 ಪುಟ : 4 ಬೆಲೆ : 3.00 ಮಂಗಳವಾರ ಜನವರಿ 23, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 310 Pages : 4 Price : 3.00 Tuesday JANUARY 23, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಅಯೋಧ್ಯೆಯಲ್ಲಿ ಬಾಲ ರಾಮನ ಪ್ರತಿಷ್ಠಾಪನಾ ಮಹೋತ್ಸವ: ಜಿಲ್ಲೆಯೆಲ್ಲೆಡೆ ಸಂಭ್ರಮ

# ಭಕ್ತಿಯಲ್ಲಿ ಮಿಂದೆದ್ದ ಶ್ರೀರಾಮ ಭಕ್ತರು







**■ವಿಜಯಸಾಕ್ಷಿ ಸುದ್ದಿ, ಗದಗ**

ಸೋಮವಾರ ಅಯೋಧ್ಯೆಯ ಶ್ರೀರಾಮ ಮಂದಿರದಲ್ಲಿ ಪ್ರಭು ಶ್ರೀರಾಮಚಂದ್ರನ ಪ್ರಾಣ ಪ್ರತಿಷ್ಠಾಪನೆಯ ಶುಭ ಸಂದರ್ಭವನ್ನು ಜಿಲ್ಲೆಯಾದ್ಯಂತ ಭಕ್ತಾದಿಗಳು ಶ್ರದ್ಧಾ-ಭಕ್ತಿಯಿಂದ ವೀಕ್ಷಿಸಿದರಲ್ಲದೆ, ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ, ಹೋಮ-ಹವನ, ಪ್ರಸಾದ ವಿತರಣೆ, ಅನ್ನ ಸಂತರ್ಪಣೆಯ ಮೂಲಕ ಸಂಭ್ರಮದ ಕ್ಷಣಗಳಿಗೆ ಸಾಕ್ಷಿಯಾಗಿ ಹಬ್ಬದಂತೆ ಆಚರಿಸಿದರು.

ಗದಗ-ಬೆಟಗೇರಿ ಅವಳಿ ನಗರವೂ ಸೇರಿದಂತೆ ಜಿಲ್ಲೆಯ ತಾಲೂಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿಯೂ ಶ್ರೀರಾಮ ಜನ್ಮಭೂಮಿಯಲ್ಲಿ ಬಾಲ ಶ್ರೀರಾಮ ಪ್ರಾಣ ಪ್ರತಿಷ್ಠಾಪನೆಯ ನೇರ ಪ್ರಸಾರಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಅವಳಿ ನಗರದ ಕೆಲ ವಾರ್ಡ್‌ಗಳಲ್ಲಿ ದೊಡ್ಡ ಎಲ್‌ಸಿಡಿ ಪರದೆ, ಪ್ರೊಜೆಕ್ಟರ್ ಮೂಲಕ ನೇರ ಪ್ರಸಾರ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿತ್ತು. ಪ್ರಾಣ ಪ್ರತಿಷ್ಠಾಪನೆಯ ವಿಧಿ ವಿಧಾನಗಳನ್ನು ಕಣ್ತುಂಬಿಕೊಂಡ ಸಾರ್ವಜನಿಕರು ಘೋಷಣೆಗಳನ್ನು ಕೂಗಿ ಭಕ್ತಿಯಿಂದ ನಮಿಸಿದರು.

ಶ್ರೀರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ ಅಂಗವಾಗಿ ಅವಳಿ ನಗರದಾದ್ಯಂತ 200ಕ್ಕೂ ಹೆಚ್ಚು ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿತ್ತು. ರಾಮನಾಮ ಜಪ, ಭಜನೆ, ರಾಮತಾರಕ ಹೋಮ, ಪ್ರತ್ಯಂಗಿರಾ ಹೋಮ, ಹನುಮಾನ್ ಚಾಲೀಸಾ ಪಠಣ, ಪಲ್ಲಕ್ಕಿ ಪ್ರದಕ್ಷಿಣೆ, ಪುಣ್ಯಾಹವಾಚನ, ಭಜನೆ, ಕೀರ್ತನೆ, ಪೂಜೆ, ಆರತಿ ಹಾಗೂ ರಾಮತಾರಕ ಮಹಾ ಮಂತ್ರದ ಸಾಮೂಹಿಕ ಪಠಣ, ಸುಂದರಕಾಂಡ ಪಾರಾಯಣ, ರಾಮರಕ್ಷಾ ಸ್ತೋತ್ರ ಪಠಣ, ರುದ್ರಾಭಿಷೇಕ ಹಾಗೂ ಎಲೆಪೂಜೆ ಅಲಂಕಾರ, ಮಹಿಳೆಯರಿಂದ ಆಕರ್ಷಕ ರಂಗೋಲಿ ಸೇವೆಗಳು ಜರುಗಿದವು.

> ಶ್ರೀರಾಮ ಸೇನೆಯ ಕಾರ್ಯಕರ್ತರು ಹಮ್ಮಿಕೊಂಡಿದ್ದ 8 ಅಡಿ ಎತ್ತರದ ಶ್ರೀರಾಮ ಮೂರ್ತಿಯ ಮೆರವಣಿಗೆಗೆ ಪೊಲೀಸರು ಅಡ್ಡಿಪಡಿಸಿದರು. ಮೆರವಣಿಗೆಗೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ಪೊಲೀಸರು ಈ ಮೊದಲೇ ಸ್ಪಷ್ಟಪಡಿಸಿದ್ದರು. ಆದರೆ, ಯಾವುದೇ ಒತ್ತಡಕ್ಕೂ ಮಣಿಯದೇ ಶ್ರೀರಾಮ ಮೂರ್ತಿಯ ಮೆರವಣಿಗೆಯನ್ನು ನಡೆಸಿಯೇ ನಡೆಸುತ್ತೇವೆ ಎಂದು ಶ್ರೀರಾಮ ಸೇನೆಯ ರಾಜು ಖಾನಪ್ಪನವರ ಹಾಗೂ ಶ್ರೀರಾಮ ಸೇನೆಯ ಕಾರ್ಯಕರ್ತರು ಕೂಡ ಬಿಗಿಪಟ್ಟು ಹಿಡಿದಿದ್ದರು. ಸೋಮವಾರ ಬೆಳಗ್ಗೆಯೇ ಮೆರವಣಿಗೆ ಪ್ರಾರಂಭವಾಗುವ ಮಾರ್ಗದಲ್ಲಿ ಪೊಲೀಸರು ಬ್ಯಾರಿಕೇಡ್ ಹಾಕಿ ದಿಗ್ಬಂದನ ವಿಧಿಸಿದರು. ಅನಿವಾರ್ಯವಾಗಿ ಶ್ರೀರಾಮ ಸೇನೆ ಕಾರ್ಯಕರ್ತರು ಭವ್ಯ ಮೆರವಣಿಗೆಯನ್ನು ಕೈಬಿಡಬೇಕಾಯಿತು.

ಜೋಡ ಮಾರುತಿ ದೇವಸ್ಥಾನದ ಪಕ್ಕದಲ್ಲಿ ನಿರ್ಮಾಣಗೊಂಡಿರುವ ಮಹರ್ಷಿ ವಾಲ್ಮೀಕಿ ದೇವಸ್ಥಾನವನ್ನು ವಾಲ್ಮೀಕಿ ಸಮಾಜದ ಮುಖಂಡ ರಾಮಣ್ಣ ಉದ್ಘಾಟಿಸಿದರು. ವೀರನಾರಾಯಣ, ತ್ರಿಕೂಟೇಶ್ವರ, ವರಸಿದ್ಧಿ ವಿನಾಯಕ, ಬೆಟಗೇರಿ ಸೆಟ್ಲಮೆಂಟ್ ಮಾರುತಿ ದೇವಸ್ಥಾನ, ಮರಾಠಾ ಮಂಡಳದಲ್ಲಿ ಅಯೋಧ್ಯಾ ಶ್ರೀರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆಯ ಹಿನ್ನೆಲೆಯಲ್ಲಿ ವಿಶೇಷ ಪೂಜೆ ನೆರವೇರಿತು.


ಜೋಡ ಮಾರುತಿ ದೇವಸ್ಥಾನದ ಆವರಣದಲ್ಲಿ ಶ್ರೀರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ ಆರಂಭವಾಗುತ್ತಿದ್ದಂತೆ ಶ್ರೀರಾಮ ಸೇನೆ ಕಾರ್ಯಕರ್ತರು ಜಗ್ಗಲಿಗೆ ಬಾರಿಸುವ ಮೂಲಕ ತಮ್ಮ ಸಂತಸವನ್ನು ವ್ಯಕ್ತಪಡಿಸಿ, ಭಕ್ತಿ ಮೆರೆದರು.

## ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಪ್ರತಿಭಟನೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಅಸ್ಸಾಂನಲ್ಲಿ ಬಿಜೆಪಿ ಕಾರ್ಯಕರ್ತರು ಎಐಸಿಸಿ ಮುಖಂಡ ರಾಹುಲ್ ಗಾಂಧಿ ಅವರ ಮೇಲೆ ಮಾಡಲೆತ್ನಿಸಿದ ದಾಳಿಯನ್ನು ಖಂಡಿಸಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ನೇತೃತ್ವದಲ್ಲಿ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಜ. 23ರಂದು ಬೆಳಿಗ್ಗೆ 10.30ಕ್ಕೆ ಪ್ರತಿಭಟನೆ ಹಮ್ಮಿಕೊಂಡಿದೆ.

ಪ್ರತಿಭಟನೆಯಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್ಲ ಹಾಗೂ ಕೆಪಿಸಿಸಿ ಸದಸ್ಯರು ಸೇರಿದಂತೆ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯು ಎಲ್ಲಾ ಮುಂಡರು ಪಾಲ್ಗೊಳ್ಳುವರು.



ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯು ಎಲ್ಲಾ ಪದಾಧಿಕಾರಿಗಳು, ಗದಗ ಜಿಲ್ಲೆಯ ಎಲ್ಲಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಗದಗ ಜಿಲ್ಲೆಯ ಎಲ್ಲಾ ಮುಂಚೂಣಿ ಘಟಕಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಸದಸ್ಯರು, ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್ ಪದಾಧಿಕಾರಿಗಳು, ಎನ್.ಎಸ್.ಯು.ಐ. ಘಟಕದ ಪದಾಧಿಕಾರಿಗಳು, ಸೇವಾದಳದ ಪದಾಧಿಕಾರಿಗಳು ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಭಾಗವಹಿಸಿ ಸದರಿ ಪ್ರತಿಭಟನೆ ಯಶಸ್ವಿಗೊಳಿಸಲು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಹಾಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ, ಗದಗ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾಟನ್ ಸೇಲ್ ಸೊಸೈಟಿಯಲ್ಲಿ ಸುದ್ದಿಗಾರರೊಂದಿಗೆ ಸಚಿವ ಎಚ್.ಕೆ. ಪಾಟೀಲ

## ಗ್ಯಾರಂಟಿ ಮೇಲ್ವಿಚಾರಣೆಗೆ ಜಿಲ್ಲಾ ಮಟ್ಟದ ಸಮಿತಿ




**■ವಿಜಯಸಾಕ್ಷಿ ಸುದ್ದಿ, ಗದಗ**

ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಜಾರಿಗೊಳಿಸಿರುವ ಗ್ಯಾರಂಟಿ ಕಾರ್ಯಕ್ರಮಗಳ ಮೇಲ್ವಿಚಾರಣೆಗೆ ರಾಜ್ಯಮಟ್ಟದ ಸಮಿತಿ ಜೊತೆ-ಗೆ ಜಿಲ್ಲಾ ಮಟ್ಟದಲ್ಲಿಯೂ ಸಮಿತಿ ರಚಿಸಲಾಗುವುದಲ್ಲದೆ, ರಾಜ್ಯ ಸಮಿತಿ ಅಧ್ಯಕ್ಷರಿಗೆ ಸಂಪುಟ ದರ್ಜೆ ಸಚಿವರ ಸ್ಥಾನಮಾನ ನೀಡಲಾಗುವುದು ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಇಲಾಖೆ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕಾಟನ್ ಸೇಲ್ ಸೊಸೈಟಿಯಲ್ಲಿ ಎಐಸಿಸಿ ಕಾರ್ಯದರ್ಶಿ ಮಯೂರ ಜಯಕುಮಾರ್ ಅವರೊಂದಿಗಿನ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಗ್ಯಾರಂಟಿ ಕಾರ್ಯಕ್ರಮಗಳು ಕಾಂಗ್ರೆಸ್ಸಿನ ಬಹುದೊಡ್ಡ ಭರವಸೆಗಳಾಗಿವೆ. ಅವುಗಳ ಅನುಷ್ಠಾನ ಯಾವ ರೀತಿ ನಡೆದಿದೆ ಎನ್ನುವ ಕುರಿತು ಪಕ್ಷದ ವೇದಿಕೆಯಲ್ಲಿ ಚರ್ಚೆಯಾಗಿದೆ. ಗ್ಯಾರಂಟಿ ಅನುಷ್ಠಾನದ ಬಗ್ಗೆ ಪಕ್ಷದ ವರಿಷ್ಠರು ಸಂತಸ ವ್ಯಕ್ತಪಡಿಸಿದ್ದಾರೆ ಎಂದರು.

ಗ್ಯಾರಂಟಿ ಕಾರ್ಯಕ್ರಮದ ಮೂಲಕ ರಾಜ್ಯದ 1 ಕೋಟಿ ಜನರನ್ನು ಬಡತನ ರೇಖೆಯಿಂದ ಮೇಲೆತ್ತುವ ಕಾರ್ಯವಾಗಿದೆ. ಗ್ಯಾರಂಟಿ ಅನುಷ್ಠಾನದಲ್ಲಿ ಶೇ. 100ರಷ್ಟು ಗುರಿ ಸಾಧಿಸುವತ್ತ ನಮ್ಮ ಪ್ರಯತ್ನ ನಡೆದಿದೆ. ಆ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳಿಂದ ಹೊರಗುಳಿದವರಿಗೆ ಯೋಜನೆಯ ಲಾಭ ದೊರಕಿಸುವ ಪ್ರಯತ್ನ ನಡೆದಿದೆ ಎಂದರು.

ಜಿಲ್ಲೆಯಲ್ಲಿ ಗೃಹಲಕ್ಷ್ಮೀ-ಶೇ. 99.64, ಅನ್ನಭಾಗ್ಯ-ಶೇ. 93.45, ಗೃಹಜ್ಯೋತಿ ಯೋಜನೆಯಲ್ಲಿ ಶೇ. 99ರಷ್ಟು ಗುರಿ ಸಾಧನೆಯಾಗಿದೆ. ಶಕ್ತಿ ಯೋಜನೆಯಡಿ ಪ್ರತಿದಿನ 1.41 ಲಕ್ಷ ಮಹಿಳೆಯರು ಪ್ರಯೋಜನ ಪಡೆಯುತ್ತಿದ್ದಾರೆ. ಈವರೆಗೆ ಒಟ್ಟು 2.50 ಕೋಟಿ ಮಹಿಳೆಯರು ಬಸ್ಸುಗಳಲ್ಲಿ ಪ್ರಯಾಣ ಮಾಡಿದ್ದಾರೆ. ಯುವನಿಧಿ ಕಾರ್ಯಕ್ರಮಕ್ಕೂ 2 ಸಾವಿರ ಯುವಕರು ನೋಂದಣಿ ಮಾಡಿಕೊಂಡಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ರೋಣ ಶಾಸಕ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ ಮುಂತಾದವರು ಉಪಸ್ಥಿತರಿದ್ದರು.

### 7 ವರ್ಷಗಳ ಕನಸು ನನಸಾದ ಸಂತಸದಲ್ಲಿ ರಿದಾ ನದಾಫ್

## ಜಿಲ್ಲೆಯ ಇಬ್ಬರಿಗೆ ಗಣರಾಜ್ಯೋತ್ಸವಕ್ಕೆ ಆಮಂತ್ರಣ

**■ವಿಜಯಸಾಕ್ಷಿ ಸುದ್ದಿ, ಗದಗ**

7 ವರ್ಷಗಳ ಹಿಂದೆ ನೋಟು ರದ್ಧತಿ ಕುರಿತಾಗಿ ಬಾಲಕಿಯೊಬ್ಬಳು ಬರೆದ ಪತ್ರವನ್ನು ಮೆಚ್ಚಿದ ಪ್ರಧಾನಿ ನರೇಂದ್ರ ಮೋದಿ, ತಮ್ಮ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಈ ಬಾಲಕಿಯ ಅಭಿಪ್ರಾಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಈ ಪ್ರೇರಣೆಯಿಂದ ಇನ್ನಷ್ಟು ಹೆಮ್ಮೆಪಟ್ಟ ಬಾಲಕಿ, ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾಗುವ ಕನಸು ಕಂಡಿದ್ದಳು. ಪುಟ್ಟ ಹುಡುಗಿಯ ಕನಸು 7 ವರ್ಷಗಳ ನಂತರ ಇದೀಗ ನನಸಾಗುತ್ತಿದೆ.

ಆಕೆ ರಿದಾ ಅಲ್ಲಾಭಕ್ಷಿ ನದಾಫ್. ಲಕ್ಷ್ಮೇಶ್ವರದ ಯುವತಿ. 2017ರಲ್ಲಿ ರಿದಾ ನದಾಫ್ ಇಲ್ಲಿನ ಆಕ್ಸ್‌ಫರ್ಡ್ ಶಾಲೆಯಲ್ಲಿ 7ನೇ ತರಗತಿಯಲ್ಲಿದ್ದಾಗ ಪ್ರಧಾನಿ ಮೋದಿಯವರಿಗೆ ಪತ್ರ ಬರೆದಿದ್ದಳು. ಪತ್ರವನ್ನು ಉಲ್ಲೇಖಿಸಿ ಪ್ರಧಾನಿ ಮೋದಿ ಅಪಾರ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಇದೀಗ, 7 ವರ್ಷಗಳ ನಂತರ ದೆಹಲಿಯಲ್ಲಿ ನಡೆಯಲಿರುವ 2024ರ ಸಾಲಿನ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಪ್ರಧಾನಿ ಕಚೇರಿಯಿಂದಲೇ ರಿದಾ ನದಾಫ್‌ರಿಗೆ ಅಧಿಕೃತ ಆಹ್ವಾನ ಬಂದಿದೆ.

ಅಂದು ಪ್ರಧಾನಿ ಮೋದಿಯವರನ್ನು ಭೇಟಿಯಾಗುವ ಕನಸು ಕಂಡಿದ್ದ ರಿದಾ ನದಾಫ್‌ಗೆ ಈಗ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗುವ, ದೆಹಲಿ ಐತಿಹಾಸಿಕ ಸ್ಥಳಗಳಿಗೆ ಭೇಟಿ ನೀಡುವ, ಪ್ರಧಾನಿ ನರೇಂದ್ರ ಮೋದಿಯವರನ್ನೂ ಭೇಟಿಯಾಗುವ ಅವಕಾಶ ಒದಗಿ ಬಂದಿದೆ.





> ಗದುಗಿನ ಕಲಾಚೇತನ ಸಾಂಸ್ಕೃತಿಕ ಅಕಾಡೆಮಿಯ ಅಧ್ಯಕ್ಷ ಕಾವೆಂಶ್ರೀ ಅವರಿಗೂ ದೆಹಲಿಯಲ್ಲಿ ನಡೆಯಲಿರುವ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ಬಂದಿದೆ. ಪ್ರಧಾನಿ ನರೇಂದ್ರ ಮೋದಿ, ಕಾವೆಂಶ್ರೀ ಅವರ ಸಾಂಸ್ಕೃತಿಕ ಸೇವೆಯ ಕುರಿತಾಗಿ ತಮ್ಮ ಮನ್ ಕಿ ಬಾತ್‌ನಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಕಲೆ, ಸಾಹಿತ್ಯ, ಸಂಗೀತ ಕ್ಷೇತ್ರದ ಸಾಧಕರಿಗೆ ವೇದಿಕೆ ಕಲ್ಪಿಸುವ ಮೂಲಕ ಸಾಂಸ್ಕೃತಿಕ ಸೇವೆಯಲ್ಲಿ ತೊಡಗಿರುವ ಕಾ.ವೆಂ. ಶ್ರೀನಿವಾಸಮೂರ್ತಿ ಅವರೂ ದೆಹಲಿಗೆ ಪ್ರಯಾಣ ಬೆಳೆಸಲಿದ್ದಾರೆ.

### ನಿಜಶರಣ ಅಂಬಿಗರ ಚೌಡಯ್ಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ಸಚಿವ ಎಚ್.ಕೆ. ಪಾಟೀಲ

## ಅಂಬಿಗರ ಸಮುದಾಯ ಶಿಕ್ಷಣಕ್ಕೆ ಒತ್ತು ನೀಡಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನಿಜಶರಣ ಅಂಬಿಗರ ಚೌಡಯ್ಯರವರು 12ನೇ ಶತಮಾನ ಕಂಡ ಶ್ರೇಷ್ಠ ಶರಣರಲ್ಲಿ ಓರ್ವರಾಗಿದ್ದರು. ಸಮಸಮಾಜದ ಪ್ರತಿಪಾದಕ, ತನ್ನ ವಚನಗಳ ಮೂಲಕ ಸಮಸಮಾಜದ ಕನಸಕಂಡವರು. ವಚನಗಾರಲ್ಲೇ ವಿಭಿನ್ನವಾದ ನಿಲುವು ಹೊಂದಿದ್ದವರು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ರವಿವಾರ ನಗರದ ಸಂಭಾಪೂರ ರಸ್ತೆಯಲ್ಲಿನ ಹವಾಮಾನ ಇಲಾಖೆ ಪಕ್ಕದಲ್ಲಿ ಏರ್ಪಡಿಸಿದ್ದ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.



ಇದೇ ಸಂದರ್ಭದಲ್ಲಿ ಅಂಬಿಗರ ಚೌಡಯ್ಯ ಟ್ರಸ್ಟ್ ಕಾಂರ್ಯಾಲಂಯುವನ್ನು ಸಚಿವ ಎಚ್.ಕೆ. ಪಾಟೀಲ ಲೋಕಾರ್ಪಣೆಗೊಳಿಸಿದರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವಿ. ಸಂಕನೂರ ಪಾಲ್ಗೊಂಡು ಮಾತನಾಡಿ, ನಿಜಶರಣ ಅಂಬಿಗರ ಚೌಡಯ್ಯನವರ ಸಮುದಾಯ ಭವನ ನಿರ್ಮಾಣಕ್ಕೆ ಶಾಸಕರ ಅನುದಾನದಲ್ಲಿ 6 ಲಕ್ಷ ರೂ ನೀಡಲಾಗಿದೆ. ಇನ್ನೂ ಹೆಚ್ಚಿನ ಸಹಕಾರ ನೀಡಲಾಗುವುದು ಎಂದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ನರಸೀಪುರ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದ ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ವಹಿಸಿದ್ದರು. ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಶಿವಾನಂದ ಹೆಚ್.ಪರಸಣ್ಣವರ ಅವರು ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಿದರು.

ಸಮಾಜದ ಮುಖಂಡರಾದ ಬಿ.ಎನ್. ಎರನಾಳ, ಜೆ.ಬಿ. ಗಾರವಾಡ, ಮಾಲತೇಶ ಬಾರ್ಕಿ, ಯಲ್ಲಪ್ಪ ಬಾರಕೇರ, ಮಾರುತಿ ಕೌದಿ, ಚಂದ್ರಶೇಖರ್ ಅಂಬಿಗೇರ, ಮಂಜುನಾಥ ಸುಣಗಾರ, ಗುರಪ್ಪ ಆದಪ್ಪನವರ, ಕಾಶಪ್ಪ ಬಳಗಾನೂರ, ಗುರುಶಾಂತ ಸುಡಿ, ಲಕ್ಷ್ಮಣ ಕಾಗನೂರ, ರಮೇಶ ರಿತ್ತಿ, ವಸಂತ ದೊಡ್ಡಮನಿ ಮುಂತಾದವರು ಉಪಸ್ಥಿತಿ ವಹಿಸಿದ್ದರು.

ತಹಸೀಲ್ದಾರ ಶ್ರೀನಿವಾಸ್ ಮೂರ್ತಿ ಕುಲಕರ್ಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ.ಬಿ. ಇದ್ದರು. ಪಂ ವೆಂಕಟೇಶ ಅಲ್ಕೋಡ ಮತ್ತು ತಂಡದವರು ವಚನ ಗಾಯನ ಪ್ರಸ್ತುತ ಪಡಿಸಿದರು.

> ಶಿಕ್ಷಣಕ್ಕೆ ಅಂಬಿಗರ ಸಮುದಾಯ ಒತ್ತು ನೀಡಲಿ. ತಮ್ಮ ಸಮಾಜದ ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸಬೇಕು ಹಾಗೂ ಸಮಾಜದಲ್ಲಿ ಎಲ್ಲರಂತೆ ಗೌರವದಿಂದ ಜೀವನ ಸಾಗಿಸಬೇಕು. ಉನ್ನತ ಹುದ್ದೆಗಳಲ್ಲಿ ಸಮಾಜದ ಮಕ್ಕಳು ಕಾರ್ಯ ನಿರ್ವಸಲಿ ಎಂದ ಸಚಿವ ಎಚ್.ಕೆ. ಪಾಟೀಲ, ನಿಜಶರಣ ಅಂಬಿಗರ ಚೌಡಯ್ಯನವರ ಸಮುದಾಯ ಭವನ ನಿರ್ಮಾಣಕ್ಕೆ 10 ಲಕ್ಷ ರೂ ಅನುದಾನ ನೀಡುವದಾಗಿ ಭರವಸೆ ನೀಡಿದರು.

## ಸಾಕ್ಷಿ ಸುಭಾಷಿತ

ಚೆನ್ನಾಗಿ ಮಾತನಾಡಲು ಚಾತುರ್ಯವಿರಬೇಕು;
ಆದರೆ ಕೇಳಿದ್ದನ್ನು ಅರ್ಥಮಾಡಿಕೊಳ್ಳಲು
ಬುದ್ಧಿವಂತಿಕೆ ಇರಬೇಕು.
–ಸುಭಾಷಿತ

## ಜ.23, 24ರಂದು ರಾಜ್ಯ ಮಟ್ಟದ ಆಪ್ತ ಸಮಾಲೋಚಕರ ಕಾರ್ಯಾಗಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕಿಶೋರ ಸ್ವಾಸ್ಥ್ಯ ಕಾರ್ಯಕ್ರಮದ ಸಂಯುಕ್ತಾಶ್ರಯದಲ್ಲಿ ಸಮಾಲೋಚನಾ ಸಂಗಮ–2 ರಾಜ್ಯ ಮಟ್ಟದ ಆಪ್ತ ಸಮಾಲೋಚಕರ ಕಾರ್ಯಾಗಾರವನ್ನು ಜನವರಿ 23 ಮತ್ತು 24 ರಂದು ನಗರದ ಪಂ. ಭೀಮಸೇನ್ ಜೋಶಿ ಜಿಲ್ಲಾ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದ ಉದ್ಘಾಟನೆಯು ಜನವರಿ 23 ರಂದು ಬೆಳಿಗ್ಗೆ 10 ಗಂಟೆಗೆ ಜರುಗಲಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕರಾದ ಡಾ. ನವೀನ ಭಟ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಆರ್.ಸಿ.ಎಚ್. ಯೋಜನಾ ನಿರ್ದೇಶಕರಾದ ಡಾ. ಶ್ರೀನಿವಾಸ ಗುಲ್ಲೂರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ. ಮುಖ್ಯ ಲೆಕ್ಕಾಧಿಕಾರಿ ಪ್ರಶಾಂತ ಜೆ.ಸಿ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪರಶುರಾಮ ಶೆಟ್ಟೆಪ್ಪಣ್ಣವರ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್., ಆರ್.ಬಿ.ಎಸ್.ಕೆ. ಉಪನಿರ್ದೇಶಕರಾದ ಡಾ. ವೀಣಾ ಆಗಮಿಸುವರು.

### ಅಡುಗೆ ಸಿಬ್ಬಂದಿಗಳ ತರಬೇತಿ ಕಾರ್ಯಾಗಾರದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಮಕ್ಕಳಿಗೆ ಗುಣಮಟ್ಟದ ಊಟ ತಯಾರಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಾಲೆಗಳಲ್ಲಿ ಮತ್ತು ಮನೆಗಳಲ್ಲಿ ರುಚಿಕಟ್ಟಾದ ಅಡಿಗೆ ತಯಾರಿಕೆಯಲ್ಲಿ ಅಡುಗೆ ಸಿಬ್ಬಂದಿಗಳ ಪಾತ್ರ ಮಹತ್ತರವಾಗಿದೆ. ಬಿಸಿಯೂಟದಲ್ಲಿ ಸ್ವಚ್ಛತೆ ಕಾಪಾಡುವುದು ಮುಖ್ಯ. ಸರಕಾರದ ನಿಯಮಗಳ ಪ್ರಕಾರ ಅಳತೆಗೆ ತಕ್ಕ ಗುಣಮಟ್ಟದ ಆಹಾರ ತಯಾರಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆಯ ಆವರಣದಲ್ಲಿ ಕರ್ನಾಟಕ ಸರಕಾರ, ಜಿ.ಪಂ, ತಾ.ಪಂ., ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಗದಗ, ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ ಯೋಜನೆ ಅಡಿಯಲ್ಲಿ ಶಿರಹಟ್ಟಿ, ಲಕ್ಷ್ಮೇಶ್ವರ ತಾಲೂಕುಗಳ ಅಡುಗೆ ಸಿಬ್ಬಂದಿ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಪೌಷ್ಟಿಕ ಆಹಾರ ನೀಡುವುದರ ಜತೆಗೆ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಅಡುಗೆ ಸಿಬ್ಬಂದಿಗಳು ಅತಿ ಹೆಚ್ಚು ಜಾಗೃತೆ ವಹಿಸಿ ಬಿಸಿಯೂಟ ತಯಾರಿಸಿ, ಸಮರ್ಪಕವಾಗಿ ಮಕ್ಕಳಿಗೆ ವಿತರಿಸಬೇಕು. ಮಕ್ಕಳಿಗೆ ಮನೆಯ ವಾತಾವರಣದಂತೆ ಊಟ ನೀಡುವದರಿಂದ ಮಕ್ಕಳು ಇಷ್ಟಪಟ್ಟು



ಊಟ ಮಾಡುವಂತಾಗುತ್ತದೆ. ಅದಕ್ಕಾಗಿ ರುಚಿಯಾದ, ಶುಚಿಯಾದ ಆಹಾರವನ್ನು ತಯಾರಿಸಿ ನೀಡಬೇಕು ಎಂದು ಹೇಳಿದ ಅವರು, ತರಕಾರಿ ವಿಷಯದಲ್ಲಿ ಸರಿಯಾಗಿ ಬಳಕೆಯಾಗುವದಿಲ್ಲ ಎನ್ನುವ ದೂರ ಸಹಜವಾಗಿದ್ದರೂ ಸಹ ಅದನ್ನು ಅಲಕ್ಷಿಸುವಂತಿಲ್ಲ. ಸ್ಥಳೀಯವಾಗಿ ಸಿಗುವ ಪೌಷ್ಟಿಕಾಂಶವುಳ್ಳ ಆಹಾರ ಪದಾರ್ಥಗಳನ್ನು ಬಳಸುವ ಮೂಲಕ ಮಕ್ಕಳಿಗೆ ಗುಣಮಟ್ಟದ ಆಹಾರ ತಯಾರಿಸಬೇಕು ಎಂದರು.

ಮಕ್ಕಳಿಗೆ ಮುಖ್ಯ ಶಿಕ್ಷಕರಾಗಲಿ, ಅಡುಗೆ ಸಿಬ್ಬಂದಿಯಾಗಲಿ ಬಿಸಿಯೂಟದಲ್ಲಿ ಯಾವುದೇ ಕಾರಣಕ್ಕೂ ಅನ್ಯಾಯ ಮಾಡಬಾರದು. ಅಡುಗೆ ಸಿಬ್ಬಂದಿಗಳು ಅಡುಗೆ ಮಾಡುವ ಸಂದರ್ಭದಲ್ಲಿ ಕಡ್ಡಾಯವಾಗಿ ಏಪ್ರಾನ್ ಧರಿಸಿರಬೇಕು. ಅಡುಗೆ ಕೋಣೆ, ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು. ಬೆಂಕಿ ಅವಘಡಗಳು ಸಂಭವಿಸುವ ಅವಕಾಶ ಇರುವುದರಿಂದ ಅಗ್ನಿನಂದಕಗಳನ್ನು ಬಾಗಿಲ ಬಳಿ ಇಟ್ಟುಕೊಳ್ಳಬೇಕು. ಮಕ್ಕಳ ಹಾಗೂ ನಿಮ್ಮ ಸುರಕ್ಷತೆಯೇ ಮೊದಲ ಆದ್ಯತೆ ಹಾಗೂ ಆರೋಗ್ಯದ ವಿಷಯದಲ್ಲಿಯೂ ಅಲಕ್ಷ್ಯ ಸಲ್ಲದು. ಇಲಾಖೆಯಿಂದ ವರ್ಷಕ್ಕೆ ಒಮ್ಮೆ ಆರೋಗ್ಯ ತಪಾಸಣೆ ಕೈಗೊಳ್ಳುವ ಬಗ್ಗೆ ಗಮನ ಹರಿಸುವದಾಗಿ ಹೇಳಿದರು.

ಅಗ್ನಿ ಶಾಮಕ ಠಾಣೆಯ ಠಾಣಾಧಿಕಾರಿ ಎಸ್.ಎಲ್. ಪಾಟೀಲ ಮಾತನಾಡಿ, ಅಗ್ನಿ ಅವಘಡ ಸಂಭವಿಸಿದಾಗ ಎದೆಗುಂದದೆ ಅಪಾಯದಲ್ಲಿ ಸಿಲುಕಿದವರನ್ನು ಮೊದಲು ಹೇಗೆ ರಕ್ಷಣೆ ಮಾಡಬೇಕು ಎಂಬುದರ ತಿಳಿವಳಿಕೆಯನ್ನು ವಿವರಿಸಿ, ಸಂಭವಿಸಬಹುದಾದ ಅಪಾಯ ಮತ್ತು ರಕ್ಷಣೆ ಬಗ್ಗೆ ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಇ.ಓ. ಕೃಷ್ಣಪ್ಪ ಧರ್ಮರ, ಎಂ.ಬಿ. ಹೊಸಮನಿ, ಡಿ.ಎಚ್. ಪಾಟೀಲ, ಜೆ.ಡಿ. ಲಮಾಣಿ, ಎಸ್.ಎಫ್. ಪಟ್ಟೇದ, ಎಚ್.ಎಫ್. ಕಡ್ಡಿಪೂಜಾರ, ವಿನಯ ಬಳ್ಳಾರಿ, ಎಸ್.ಎಫ್. ಪಟ್ಟೇದ, ಚಂದ್ರು ನೇಕಾರ, ಸಿಆರ್‌ಪಿಗಳಾದ ಜ್ಯೋತಿ ಗಾಯಕವಾಡ, ಸತೀಶ ಬೋಮಲೆ, ಉಮೇಶ ನೇಕಾರ, ಸಾವಿರಕುರಿ, ಸತೀಶ ಪಶುಪತಿಹಾಳ, ತಿರಕಪ್ಪ ಪೂಜಾರ ಸೇರಿದಂತೆ ಅನೇಕರಿದ್ದರು. ಉಮೇಶ ನೇಕಾರ, ಆರ್.ಮಾಂತೇಶ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಉತ್ತಮ ಅಡುಗೆ ಸಿಬ್ಬಂದಿಗಳನ್ನು ಸನ್ಮಾನಿಸಲಾಯಿತು.

ಅಕ್ಷರದಾಸೋಹ ಸಹಾಯಕ ನಿರ್ದೇಶಕ ಎಚ್.ಎಸ್. ರಾಮನಗೌಡ್ರ ಮಾತನಾಡಿ, ತಾಜಾ ತರಕಾರಿ ಉಪಯೋಗಿಸಬೇಕು. ಆಹಾರ ಧಾನ್ಯಗಳನ್ನು ಸ್ವಚ್ಛಗೊಳಿಸುವ ಮೂಲಕ ಶುಚಿ–ರುಚಿಯಾದ ಊಟ ತಯಾರಿಸುವ ಕೌಶಲವನ್ನು ಅಡುಗೆ ಸಿಬ್ಬಂದಿ ಅನುಸರಿಸಬೇಕು. ಮಕ್ಕಳ ಭೌತಿಕ ಹಾಗೂ ಮಾನಸಿಕ ಬೆಳವಣಿಗೆಗೆ ಬಿಸಿಯೂಟ ಸಹಕಾರಿಯಾಗಿದ್ದು, ಇದರ ಅನುಷ್ಠಾನದಲ್ಲಿ ಹೆಚ್ಚಿನ ಕಾಳಜಿ, ಜವಾಬ್ದಾರಿ ಅಡುಗೆ ಸಿಬ್ಬಂದಿಗಳ ಮೇಲಿದೆ ಎಂದರು.

## ಫೆ. 16ರಂದು ಸರಕಾರಿ ನೌಕರರ ಮುಷ್ಕರ




**■ವಿಜಯಸಾಕ್ಷಿ ಸುದ್ದಿ, ಗದಗ**

ವೇತನ ಪರಿಷ್ಕರಣೆ ಮತ್ತು ಎನ್ ಪಿಎಸ್ ರದ್ದುಗೊಳಿಸುವುದು ಸೇರಿದಂತೆ ಸರಕಾರಿ ನೌಕರರ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಫೆ. 16ರಂದು ರಾಷ್ಟ್ರವ್ಯಾಪಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಸರಕಾರಿ ನೌಕರರ ಒಕ್ಕೂಟದ ರಾಜ್ಯಾಧ್ಯಕ್ಷ ಜೈಕುಮಾರ ಎಚ್. ಎಸ್. ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ರಾಜ್ಯ ಸರಕಾರಿ ನೌಕರರು ತಮ್ಮ ಸೇವೆಗೆ ಗೈರು ಆಗುವ ಮೂಲಕ ಮುಷ್ಕರ ನಡೆಸಲಿದ್ದಾರೆ. ದೇಶಾದ್ಯಂತ ಎಲ್ಲ ಸರಕಾರಿ ನೌಕರರು ಆ ದಿನ ಪ್ರತಿಭಟನೆ ನಡೆಸಲಿದ್ದಾರೆ ಎಂದು ತಿಳಿಸಿದರು.

ದೇಶದ ಅನೇಕ ರಾಜ್ಯಗಳು ಹಿಂದಿನ ಪಿಂಚಣಿ ವ್ಯವಸ್ಥೆಯನ್ನು ಜಾರಿಗೊಳಿಸಲು ಮುಂದಾಗಿದೆ. ಆದರೆ ಕೇಂದ್ರದ ಪಿ.ಎಫ್.ಆರ್.ಡಿ.ಎ ಕಾಯಿದೆ ಅದಕ್ಕೆ ತೊಡಕಾಗಿ ಪರಿಣಮಿಸಿದೆ. ಹೀಗಾಗಿ ಕೇಂದ್ರ ಸರಕಾರದ ಪಿಎಫ್ ಆರ್ ಡಿ ಎ ಕಾಯಿದೆಯನ್ನು ರದ್ದುಗೊಳಿಸಿ ಈ ಮೊದಲಿನ ಪಿಂಚಣಿ ವ್ಯವಸ್ಥೆಯನ್ನು ಜಾರಿಗೊಳಿಸಬೇಕು ಎನ್ನುವುದು ಹೋರಾಟದ ಮುಖ್ಯ ಉದ್ದೇಶವಾಗಿದೆ.

ಅದರ ಜೊತೆಗೆ 7ನೇ ವೇತನ ಪರಿಷ್ಕರಣೆ, ಹೊರಗುತ್ತಿಗೆ ಅಥವಾ ಒಳಗುತ್ತಿಗೆ ವ್ಯವಸ್ಥೆಯನ್ನು ಸ್ಥಗಿತಗೊಳಿಸಿ ನಿಯಮಾನುಸಾರ ಹುದ್ದೆಗಳನ್ನು ಭರ್ತಿ ಮಾಡಬೇಕು. ಸಾರ್ವಜನಿಕ ಉದ್ದಿಮೆಗಳನ್ನು ಖಾಸಗೀಕರಣ ಮಾಡುವುದನ್ನು ನಿಲ್ಲಿಸಬೇಕು ಎನ್ನುವ ಹಕ್ಕೊತ್ತಾಯಗಳನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್ ಶೋಭಾಲೋಕ ನಾಗಣ್ಣ ಮಾತನಾಡಿ, ಕೇಂದ್ರ ಸರ್ಕಾರವು ಪಿ.ಎಫ್.ಆರ್.ಡಿ.ಎ ಕಾಯಿದೆ, ಎನ್.ಪಿ.ಎಸ್ ಪದ್ಧತಿಯ ಮೂಲಕ ನೌಕರರ ಪಿಂಚಣಿ ಹಣವನ್ನು ಷೇರುಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿ ಕಾರ್ಪೊರೇಟ್ ಕಂಪನಿಗಳಿಗೆ ಹರಿದು ಹೋಗುವಂತೆ ಮಾಡಿದೆ. ಈ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರವು ಪಿ.ಎಫ್.ಆರ್.ಡಿ.ಎ ಕಾಯಿದೆಯನ್ನು ರದ್ದುಗೊಳಿಸಿದೆ ಎಂದು ಆರೋಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಲತೀಫ್ ಕುನ್ನಿಭಾವಿ, ಶ್ರೀಧರ ಚಿನಗುಂಡಿ, ಬಸವರಾಜ ಪೂಜಾರ ಇದ್ದರು.

# ವಿವಿಧ ಬೇಡಿಕೆಗಳ ಈಡೇರಿಕೆಗೆ ಮನವಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಲಕ್ಷ್ಮೇಶ್ವರ ತಾಲೂಕು ಘಟಕ ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಶಾಸಕ ಡಾ. ಚಂದ್ರು ಲಮಾಣಿಯವರಿಗೆ ನೌಕರರ ವಿವಿಧ ಬೇಡಿಕೆಗಳ ಕುರಿತು ಮನವಿ ಪತ್ರ ಸಲ್ಲಿಸಲಾಯಿತು.

ರಾಜ್ಯದ ಸರ್ಕಾರಿ ನೌಕರರ ಕರ್ತವ್ಯ ನಿಷ್ಠೆ ದೇಶದಲ್ಲಿಯೇ ಮಾದರಿಯಾಗಿದೆ. ಆದರೆ ಇಲ್ಲಿಯವರೆಗೆ 7ನೇ ವೇತನ ಆಯೋಗದ ಸವಲತ್ತುಗಳು ಅನುಷ್ಠಾನಗೊಳಿಸಲಾಗಿಲ್ಲ. ಹಿಂದಿನ ಸರ್ಕಾರವು ಜಾರಿಗೊಳಿಸಿದ ಜ್ಯೋತಿ ಸಂಜೀವಿನಿ ಆರೋಗ್ಯ ಯೋಜನೆಯನ್ನು ಸರ್ಕಾರಿ ನೌಕರರ ಕುಟುಂಬಕ್ಕೆ ಅನುಕೂಲವಾಗುವಂತೆ ಶೀಘ್ರವೇ ಜಾರಿಗೊಳಿಸಬೇಕು. ಹಳೆಯ ನಿವೃತ್ತಿ ವೇತನ ವ್ಯವಸ್ಥೆ ಮರುಸ್ಥಾಪನೆ ಆಗಬೇಕು. ಈ ಬಗ್ಗೆ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಸೇರಿಸಿದ 2006ರ ನಂತರ ಸೇವೆಗೆ ಸೇರಿದ ಸರ್ಕಾರಿ ಅನುದಾನಿತ ಹಾಗೂ ನಿಗಮ ಮಂಡಳಿ ನೌಕರರಿಗೆ ತಕ್ಷಣವೇ ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿಗೆ ಮಾಡಲು ಸಚಿವ ಸಂಪುಟದಲ್ಲಿ ನಿರ್ಧಾರ ತೆಗೆದುಕೊಳ್ಳಬೇಕೆಂದು ಮುಖಂಡರು ಮನವಿ ಮಾಡಿದರು.2



ಮನವಿ ಸ್ವೀಕರಿಸಿದ ಶಾಸಕ ಡಾ. ಚಂದ್ರು ಲಮಾಣಿ, ಹಳೆ ಪಿಂಚಣಿ ಯೋಜನೆ ಜಾರಿಗೊಳಿಸಿ, ಹೊಸ ಪಿಂಚಣಿ ಯೋಜನೆ ಕೈಬಿಡುವ ಮೂಲಕ ಲಕ್ಷಾಂತರ ನೌಕರರ ಹಿತಕಾಯುವಂತೆ ಒತ್ತಾಯಿಸುವದಾಗಿ ಹೇಳಿದರು.

ಸಂಘದ ಅಧ್ಯಕ್ಷ ಡಿ.ಎಚ್. ಪಾಟೀಲ, ಎನ್‌ಪಿಎಸ್ ಸಂಘದ ಅಧ್ಯಕ್ಷ ಎಫ್.ಎಸ್. ತಳವಾರ, ಪದಾಧಿಕಾರಿಗಳಾದ ಎಮ್.ಎ. ನದಾಫ, ಚಂದ್ರಕಾಂತ ನೇಕಾರ, ಎಸ್.ಎಫ್. ಮಠದ, ಎಮ್.ಬಿ. ಹೊಸಮನಿ, ಮಂಜುನಾಥ ಕೊಕ್ಕರಗುಂದಿ, ಜೆ.ಡಿ. ಲಮಾಣಿ, ಬಿ.ಎಮ್. ಕುಂಬಾರ, ಎಮ್.ಎಸ್. ಹಿರೇಮಠ, ಡಿ.ಡಿ. ಲಮಾಣಿ, ಎಲ್.ಎನ್. ನಂದೆಣ್ಣವರ, ಜೆ.ಡಿ. ಲಮಾಣಿ, ಜ್ಯೋತಿ ಗಾಯಕವಾಡ, ಸತೀಶ ಬೋಮಲೆ, ಈಶ್ವರ ಮೇಡ್ಲೇರಿ ಹಾಗೂ ವಿವಿಧ ಇಲಾಖೆಗಳ ಸಂಘದ ಪದಾಧಿಕಾರಿಗಳು ಹಾಜರಿದ್ದರು.

## ಅಖಿಲ ಕರ್ನಾಟಕ 7ನೇ ಸಾಂಸ್ಕೃತಿಕ ಸಮ್ಮೇಳನ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕೊಪ್ಪಳ ಜಿಲ್ಲೆಯ ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್ ಹಾಗೂ ಚಿತ್ರದುರ್ಗದ ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ, ಮೈಸೂರಿನ ಜೆಸ್ಟ್ ಮಾತ್ ಮಾತಲ್ಲಿ ಸ್ನೇಹಕೂಟಗಳ ಸಹಯೋಗದಲ್ಲಿ ಜ.27ರಂದು ಚಿತ್ರದುರ್ಗದ ಪತ್ರಿಕಾ ಭವನವಲ್ಲಿ ಹಮ್ಮಿಕೊಂಡಿರುವ ಅಖಿಲ ಕರ್ನಾಟಕ 7ನೇ ಸಾಂಸ್ಕೃತಿಕ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಸಾಹಿತಿ ಸತ್ಯಪ್ರಭಾ ವಸಂತಕುಮಾರ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಸಮ್ಮೇಳನದ ಸಂಚಾಲಕರಾದ ರುದ್ರಪ್ಪ ಭಂಡಾರಿ, ಡಾ. ಶಫೀಉಲ್ಲ ತಿಳಿಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತು ಇವರಿಗೆ 2021ರಲ್ಲಿ 'ಕನ್ನಡ ಸೇವಾರತ್ನ ಪ್ರಶಸ್ತಿ ನೀಡಿ ಗೌರವಿಸಿದೆ. ಆಕಾಶವಾಣಿಯಲ್ಲಿ ಇವರ ಕಥೆಗಳು, ಕವನಗಳು ಪ್ರಸಾರವಾಗಿವೆ. ವಿವಿಧ ಪತ್ರಿಕೆಗಳಲ್ಲಿ ಕಥೆ–ಕವನಗಳು ಪ್ರಕಟವಾಗಿವೆ. ಇವರ ಸರ್ವಾಧ್ಯಕ್ಷತೆಯಲ್ಲಿ ವಿಚಾರಗೋಷ್ಠಿ, ಸಾಹಿತ್ಯೋತ್ಸವ, ಕವಿಗೋಷ್ಠಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಸಂಘಟನಾ ಸಂಚಾಲಕ ಎಚ್. ಸತೀಶ್ ಕುಮಾರ್ ಪ್ರಕ್ರಣೆಯಲ್ಲಿ ತಿಳಿಸಿದ್ದಾರೆ.

## ವಿರೂಪಾಕ್ಷೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ




**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಅಯೋಧ್ಯೆಯಲ್ಲಿ ಸೋಮವಾರ ನಡೆದ ಬಾಲರಾಮ ಮೂರ್ತಿ ಪ್ರತಿಷ್ಠಾಪನೆ ಹಾಗೂ ಶ್ರೀರಾಮಮಂದಿರ ಲೋಕಾರ್ಪಣೆ ಕಾರ್ಯಕ್ರಮದ ಪ್ರಯುಕ್ತ ಸಮೀಪದ ಅಬ್ಬಿಗೇರಿಯ ವಿರುಪಾಕ್ಷೇಶ್ವರ ದೇವಾಲಯದಲ್ಲಿ ಜಿ.ಎಸ್. ಪಾಟೀಲ ಅಭಿಮಾನಿ ಬಳಗದ ವತಿಯಿಂದ ಶ್ರೀರಾಮ ಭಕ್ತರು ವಿಶೇಷ ಪೂಜೆ ಸಲ್ಲಿಸಿದರು.

ಸ್ಥಳೀಯ ಹಾಗೂ ಮುಗಳಖೋಡ ಶಾಖಾಮಠದ ಶ್ರೀಗಳಾದ ಬಸವರಾಜ ಬಸವರಡೇರ ಸಾನ್ನಿಧ್ಯ ವಹಿಸಿದ್ದರು. ಶಂಭುಶಾಸ್ತ್ರೀ ಮಾಳಶೆಟ್ಟಿ, ಸುರೇಶ ಬಸವರಡ್ಡೇರ, ಮಂಜು ಅಂಗಡಿ, ಬಸವರಾಜ ಪಲ್ಲೇದ, ಗುರಣ್ಣ ಅವರಡ್ಡಿ, ಅಂದಪ್ಪ ವೀರಾಪುರ, ರಾಮನಗೌಡ ಹಲಕುರ್ಕಿ, ತಿಮ್ಮರಡ್ಡಿ ಇಮ್ರಾಪೂರ, ಸುರೇಶ ಶಿರೋಳ, ಎಂ.ಡಿ. ಬಸವರಡ್ಡೇರ, ಭೀಮಣ್ಣ ಕಂಬಳಿ, ಅಪ್ಪಣ್ಣ ಕಲಕೇರಿ, ಶಿವಯ್ಯ ಸಾಲಿಮಠ, ಮಲಕಾಜಪ್ಪ ಕಲ್ಲೆಶ್ಯಾಣಿ, ಸಂತೋಷ ಕಲ್ಲೇಶ್ಯಾಣಿ, ಎಚ್.ಟಿ. ದ್ವಾಸಲ, ಶಿವು ಜಂತಲಿ, ಮಾರುತಿ ಬಂಡಿವಡ್ಡರ, ಕುಮಾರ ಹಳ್ಳಿ, ಕುಮಾರ ಭೀಮನಗೌಡ್ರ, ಕುಮಾರ ಬಸವರಡ್ಡೇರ, ಯಲ್ಲಪ್ಪ ಆರೇರ, ಶಶಿ ಸಂಗನಾಳ, ಪ್ರಕಾಶ ಜಕರಡ್ಡಿ, ರಮೇಶ ಕುಡಗುಂಟಿ, ರಾಜು ಅವರಡ್ಡಿ, ಬಸಪ್ಪ ಬನಿಗೋಳ ಮುಂತಾದವರು ಉಪಸ್ಥಿತರಿದ್ದರು.

# ಎನ್‌ಎಸ್‌ಎಸ್ ಭಾವೈಕ್ಯತೆ ಬೆಳೆಸುತ್ತದೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸದೃಢ ರಾಷ್ಟ್ರ ನಿರ್ಮಾಣದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಪಾತ್ರ ಮಹತ್ವದ್ದಾಗಿದೆ ಎಂದು ಕೆ.ಎಸ್.ಎಸ್ ಮಾಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ವಾಯ್. ಹುಡೇದ ಹೇಳಿದರು.

ಅವರು ಪಟ್ಟಣದ ಕನಕದಾಸ ಶಿಕ್ಷಣ ಸಮಿತಿಯ ಮಾಹಾವಿದ್ಯಾಲಯದ ವಿದ್ಯಾರ್ಥಿಗಳಿಂದ ಸಮೀಪದ ಹೊಸೂರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಎನ್‌ಎಸ್‌ಎಸ್ ಶಿಬಿರ ಉದ್ಘಾಟಿಸಿ ಮಾತನಾಡಿದರು.

ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ದೇಶಭಕ್ತಿ, ಸಮಾನತೆ, ಭಾವೈಕ್ಯತೆ ಬೆಳೆಸುತ್ತದೆ. ಸಾಮಾಜಿಕ ಹೊಣೆಗಾರಿಕೆ, ಶಿಸ್ತು, ಸಂಯಮ, ಸಮಯ ಪ್ರಜ್ಞೆಯನ್ನೂ ಕಲಿಸಿಕೊಡುತ್ತದೆ. ವಿದ್ಯಾರ್ಥಿಗಳು ಪ್ರಸ್ತುತ ಸ್ಪರ್ಧಾತ್ಮಕ ಯುಗದಲ್ಲಿ ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳಲು ಸತತ ಪ್ರಯತ್ನ ಪಡಬೇಕು. ಇದರಿಂದ ತಂದೆ–ತಾಯಿಗಳಿಗೆ, ಕಲಿಸಿದ ಗುರುಗಳಿಗೆ, ಗ್ರಾಮಕ್ಕೆ ಕೀರ್ತಿ ಬರುತ್ತದೆ ಎಂದರು.

ಸಾನ್ನಿಧ್ಯವನ್ನು ಶ್ರೀ ಮಲ್ಲಿಕಾರ್ಜುನಸ್ವಾಮಿ ಹಿರೇಮಠ ವಹಿಸಿದ್ದರು. ಗ್ರಾ.ಪಂ ಸದಸ್ಯ ಶಿವಯ್ಯ ಮನಗೇನಿ, ಪಾರ್ವತೆವ್ವ ಕಲ್ಯಾಣಿ, ಎಸ್.ಎಸ್. ಕಟ್ಟಿಮನಿ, ಸಿ.ಎ. ಹೊಂಬಣ್ಣವರ, ಎನ್‌ಎಸ್‌ಎಸ್ ಅಧಿಕಾರಿ ಎಸ್.ಎ. ಯಳವತ್ತಿ, ಕೆ.ಎಸ್. ಓದುನವರ, ಎಸ್.ಕೆ. ಯರೇವಡ್ಡರ, ಎ.ಜಿ. ಹೆಗ್ಗೆಣ್ಣವರ, ಎಸ್.ಜಿ. ಕುಲಕರ್ಣಿ ಸೇರಿದಂತೆ ಶಿಬಿರಾರ್ಥಿಗಳು, ಗ್ರಾಮದ ಮುಖಂಡರು ಇದ್ದರು.

# ಮಾರುತೇಶ್ವರನಿಗೆ ವಿಶೇಷ ಪೂಜೆ, ಅನ್ನಸಂತರ್ಪಣೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶ್ರೀರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ಸೋಮವಾರ ವೈಭವದಿಂದ ನೆರವೇರಿದ ಬಾಲರಾಮ ಮೂರ್ತಿ ಪ್ರತಿಷ್ಠಾಪನೆ ಹಾಗೂ ಶ್ರೀರಾಮಮಂದಿರ ಲೋಕಾರ್ಪಣೆ ಕಾರ್ಯಕ್ರಮದ ನಿಮಿತ್ತ ಸಮೀಪದ ಜಕ್ಕಲಿ ಗ್ರಾಮದ ಮಾರುತೇಶ್ವರ ಮಂದಿರದಲ್ಲಿ ಶ್ರೀರಾಮ ಭಕ್ತರು ಮಾರುತಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಮುಂಜಾನೆಯಿಂದಲೇ ಪೂಜಾ ಕೈಂಕರ್ಯಗಳು ನಡೆದವು. ಬಳಿಕ ಮುಖ್ಯ ದ್ವಾರದಲ್ಲಿ ಶ್ರೀರಾಮಚಂದ್ರನ



ಭಾವಚಿತ್ರಕ್ಕೆ ಹೂಮಾಲೆ ಹಾಕಿ ಶ್ರದ್ಧಾ ಭಕ್ತಿಯಿಂದ ಪೂಜೆಯನ್ನು ಸಲ್ಲಿಸಿದರು. ಮಧ್ಯಾಹ್ನ ಅನ್ನಸಂತರ್ಪಣೆ ನೆರವೇರಿತು.

ಮುಖಂಡರಾದ ಶಿವನಾಗಪ್ಪ ದೊಡ್ಡಮೇಟಿ, ಮುತ್ತಣ್ಣ ಕಡಗದ, ಶಿವಪ್ಪ ಕೆಳಗಡಿ, ಶೇಖಣ್ಣ ಮಾರನಬಸರಿ, ಜಗದೀಶ ಪಲ್ಲೇದ, ನಿಂಗಪ್ಪ ಜಾಲಣ್ಣವರ, ಮುನಿಯಪ್ಪ ಪಲ್ಲೇದ, ವೀರಪ್ಪ ತಳವಾರ, ಮಲ್ಲಿಕಾರ್ಜುನ ಮುಧೋಳ, ಸಂಗಮೇಶ ಕಡಗದ, ಅನಿಲಕುಮಾರ ಕಿಟಗೇರಿ, ವಿದ್ಯಾಧರ ಶಿರಗುಂಪಿ, ನಾಗರಾಜ ಕಡಗದ, ಮಂಜುನಾಥ ವಾಲಿ, ಅಶೋಕ ಆದಿ, ಚನ್ನಬಸಪ್ಪ ಸೂಡಿ, ರಾಮಚಂದ್ರ ಕುಲಕರ್ಣಿ, ವೀರಯ್ಯ ಹಿರೇಮಠ, ವೀರೇಶ ಮಸಲವಾಡ, ಪ್ರಮೋದ ಯಾವಗಲ್ಲ, ವೀರಭದ್ರಪ್ಪ ಮೆಣಸಗಿ ಮುಂತಾದವರು ಇದ್ದರು.

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಜನವರಿ 23ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 15,16,17 ಶಹಾಪುರ ಪೇಟೆ, ಭಜಂತ್ರಿ ಓಣಿ, ಡಿಸಿ ಮಿಲ್ ರೋಡ್, ಜವಳಗಲ್ಲಿ, ಮಹೇಂದ್ರಕರ್ ಸರ್ಕಲ್ ಲೈನ್, ಗಾಂಧಿ ಸರ್ಕಲ್ ಲೈನ್, ಮೀನಿನ ಮಾರ್ಕೆಟ್ ರೋಡ್, ಬಸವೇಶ್ವರ ಗುಡಿ ಲೈನ್, ಗಣೇಶ ಗುಡಿ ಲೈನ್ ಕೆಲವು ಭಾಗಗಳು.

ವಾರ್ಡ್ ನಂ. 16 ಡೂರಗಲ್ಲಿ, ಡಿ ಸಿ ಮಿಲ್ ರೋಡ್, ಕಟಗಿ ಅಡ್ಡೆದ ಲೈನ್. ವಾರ್ಡ್ ನಂ. 12 ನಿಸರ್ಗ ಬಡಾವಣೆ. ವಾರ್ಡ್ ನಂ. 27 ಹಮಾಲರ ಪ್ಲಾಟ್, ವೀರನಾರಾಯಣ ಬಡಾವಣೆ, ಕೆ. ಎಚ್ ಪಾಟೀಲ್ ಬಡಾವಣೆ. ವಾರ್ಡ್ ನಂ. 29 ಪರಶು ಅವರ ಲೈನ್, ನೆಲ್ಸನ್ ಮಂಡೆಲಾ ಸ್ಕೂಲ್ ಲೈನ್, ಬನ್ನಿ ಕಟ್ಟಿ ಲೈನ್ ಕೆಲವು ಭಾಗಗಳು.

ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಕೆಳಗಿನ ಭಾಗ. ವಾರ್ಡ್ ನಂ. 21, 22, 23 ಸುಡುಗಾಡಗಟ್ಟಿ ಕಾಂಪೌಂಡ್, ಅಕ್ಕಿಯವರ ಪ್ಲಾಟ್, ಮುಳವಳ್ಳಿ ಪ್ಲಾಟ್, ಕಮತರ ಪ್ಲಾಟ್, ಏಲಿಗಾರ ಪ್ಲಾಟ್, ಕರಿಬಿಷ್ಠಿಯವರ ಲೈನ್, ಶರಣಪ್ಪ ಪಾಟೀಲ್ ಲೈನ್, ಒಕ್ಕಲಗೇರಿ, ರಾಚೋಟೇಶ್ವರ ಮುಂದಿನ ಭಾಗ, ನಾಗಪ್ಪನ ಕಟ್ಟಿ, ಮಸೂತಿ.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜು ಕುರಡಗಿ ಪದಗ್ರಹಣ ಸಮಾರಂಭ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**




ಭಾರತೀಯ ಜನತಾ ಪಾರ್ಟಿಯ ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ತೋಟಪ್ಪ(ರಾಜು) ಕುರಡಗಿ ಅವರ ಪದಗ್ರಹಣ ಸಮಾರಂಭವನ್ನು ಜ.24ರ ಬೆಳಿಗ್ಗೆ 11 ಗಂಟೆಗೆ ಹುಬ್ಬಳ್ಳಿ ರಸ್ತೆಯಲ್ಲಿರುವ ಪಕ್ಷದ ಜಿಲ್ಲಾ ಕಾರ್ಯಾಲಯದಲ್ಲಿ ಏರ್ಪಡಿಸಲಾಗಿದೆ.

ಈ ಸಮಾರಂಭದಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ, ಶಾಸಕರು, ಮಾಜಿ ಸಚಿವರಾದ ಸಿ.ಸಿ. ಪಾಟೀಲ, ಲೋಕಸಭಾ ಸದಸ್ಯರಾದ ಶಿವಕುಮಾರ ಉದಾಸಿ, ಪಿ.ಸಿ. ಗದ್ದಿಗೌಡ್ರ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಮಾಜಿ ಶಾಸಕರು, ಸಚಿವರಾದ ಕಳಕಪ್ಪ ಬಂಡಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಯುವ ಧುರೀಣ ಅನಿಲ ಮೆಣಸಿನಕಾಯಿ, ಮುಖಂಡರಾದ ಕಾಂತೀಲಾಲ ಬನ್ಸಾಲಿ, ಎಂ.ಎಸ್. ಕರೀಗೌಡ್ರ, ನಿಂಗಪ್ಪ ಕೆಂಗಾರ, ವಿ.ಎಸ್. ಹಿರೇಮಠ, ವಿಭಾಗ ಪ್ರಭಾರಿಗಳಾದ ಲಿಂಗರಾಜ ಪಾಟೀಲ, ಮೋಹನ ಮಾಳಶೆಟ್ಟಿ, ಈಶಣ್ಣ ಮುನವಳ್ಳಿ, ಶ್ರೀಪತಿ ಉಡುಪಿ, ಶ್ರೀಕಾಂತ ಕಟವಟೆ, ವಿಶ್ವನಾಥ ಕಪ್ಪತ್ತನವರ, ಶಂಕ್ರಪ್ಪ ಇಂಡಿ, ರವಿ ದಂಡಿನ, ಭೀಮಸಿಂಗ ರಾಠೋಡ ಮುಂತಾದವರು ಉಪಸ್ಥಿತರಿರುವರು.

ಪಕ್ಷದ ಎಲ್ಲ ಕಾರ್ಯಕರ್ತರು, ಮುಖಂಡರು, ಪದಾಧಿಕಾರಿಗಳು, ಅಭಿಮಾನಿಗಳು ಆಗಮಿಸಬೇಕೆಂದು ಬಿಜೆಪಿ ನಿಕಟಪೂರ್ವ ಜಿಲ್ಲಾಧ್ಯಕ್ಷ ಮುತ್ತಣ್ಣ ಲಿಂಗನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ತಾಲೂಕಿನಾದ್ಯಂತ ಶ್ರೀರಾಮ ಧ್ಯಾನ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಜ.22ರಂದು ಅಯೋಧ್ಯೆಯಲ್ಲಿ ಶ್ರೀರಾಮ ಲಲ್ಲಾ ಮೂರ್ತಿ ಪ್ರತಿಷ್ಠಾಪನೆಯ ಅಂಗವಾಗಿ ಶಿರಹಟ್ಟಿ ಪಟ್ಟಣವೂ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಶ್ರೀರಾಮಲಲ್ಲಾನ ಸ್ತೋತ್ರ ಜಪಿಸುವ ಮೂಲಕ ಭಕ್ತ ಸಮೂಹ ತಮ್ಮ ಭಕ್ತಿಭಾವವನ್ನು ಮೆರೆದರು.

ಶಿರಹಟ್ಟಿ ಪಟ್ಟಣದಲ್ಲಿ ಶ್ರೀ ಆಂಜನೇಯ ದೇವಸ್ಥಾನ, ಶ್ರೀ ಅಂಭಾಭವಾನಿ ದೇವಸ್ಥಾನ, ಶ್ರೀ ವೀರಭದ್ರೇಶ್ವರ ದೇವಸ್ಥಾನ ಹಾಗೂ ಶ್ರೀ ವಿಠ್ಠಲ ಹರಿ ಮಂದಿರ ಸೇರಿದಂತೆ ಅನೇಕ ಕಡೆಗಳಲ್ಲಿ ಸ್ವಯಂಪ್ರೇರಿತರಾಗಿ ಶ್ರೀರಾಮನ ಭಕ್ತರು ಬೆಳಿಗ್ಗೆಯಿಂದಲೇ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ನೆರವೇರಿಸಿದರು.

ಕೆಲವರು ಕೀರ್ತನೆ-ಭಜನೆಗಳ ಮೂಲಕ ಶ್ರೀರಾಮನ ಧ್ಯಾನ ಮಾಡಿದರು. ಯುವಕರು ತಮ್ಮ ಬೈಕ್‌ಗಳಲ್ಲಿ ಶ್ರೀರಾಮನ ಬೃಹತ್ ಗಾತ್ರದ ಧ್ವಜವನ್ನು ಕಟ್ಟಿಕೊಂಡು ಓಡಾಡುತ್ತಿದ್ದರು. ಮನೆಗಳ ಮೇಲೂ ಸಹ ಶ್ರೀರಾಮನ ಧ್ವಜ ರಾರಾಜಿಸಿದವು. ಹಲವು ಕಡೆಗಳಲ್ಲಿ ಅನ್ನಸಂತರ್ಪಣೆಯೂ ನಡೆಯಿತು.

## ಮೂರು ದಿನ ಹೆಚ್ಚುವರಿ ಸಾರಿಗೆ ವಾಹನಗಳ ಕಾರ್ಯಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯಲ್ಲಿನ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 110 ವಿಶೇಷ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ.

ಜನವರಿ 26ರಂದು ಗಣರಾಜ್ಯೋತ್ಸವ, ಜ. 27 ರಂದು 04ನೇ ಶನಿವಾರ ವಾರಾಂತ್ಯ ಮತ್ತು ಜನವರಿ 28 ರಂದು ಭಾನುವಾರವಿರುವುದರಿಂದ ಈ ರಜೆಗಳನ್ನು ಉಪಯೋಗಿಸಿಕೊಂಡು, ಬೆಂಗಳೂರು ಮತ್ತು ಇತರೆ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ಸಂಸ್ಥೆಯ ವ್ಯಾಪ್ತಿಯಲ್ಲಿನ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ ಮತ್ತು ಬಾಗಲಕೋಟೆ ವಿಭಾಗಗಳಿಂದ ರಜೆ ಅವಧಿಯಲ್ಲಿ ಸುಮಾರು 110 ವಿಶೇಷ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ.

ರಜೆ ಅವಧಿ ಮುಗಿದ ಮೇಲೆ ಜನವರಿ 28ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಮುಖ್ಯ ಸಂಚಾರ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀರಾಮ, ವಾಲ್ಮೀಕಿ ಮೂರ್ತಿಗಳ ಮೆರವಣಿಗೆ ಕಾರ್ಯಕ್ರಮ ಉದ್ಘಾಟಿಸಿದ ರಾಮಣ್ಣ ಫಲದೊಡ್ಡಿ

# ಪ್ರಧಾನಿ ನರೇಂದ್ರ ಮೋದಿ ಅಭಿನಂದನೀಯರು

**■ವಿಜಯಸಾಕ್ಷಿ ಸುದ್ದಿ, ಗದಗ**

ಅಯೋಧ್ಯೆಯಲ್ಲಿ ಪ್ರಭು ಶ್ರೀರಾಮ ಲಲ್ಲಾ ಮೂರ್ತಿ ಪ್ರತಿಷ್ಠಾಪಿಸುವ ಮೂಲಕ ಶತಮಾನಗಳ ಕಾಲದ ವಿವಾದ ಪರಿಹಾರವಾಗಿದೆ. ಪ್ರಧಾನಿ ನರೇಂದ್ರ ಮೋದಿಯಿಂದಾಗಿ ರಾಮಾಯಣ ರಚಿಸಿದ ವಾಲ್ಮೀಕಿ ಮಹರ್ಷಿ ಅಂತಾರಾಷ್ಟ್ರೀಯ ಮಟ್ಟದ ಪ್ರಸಿದ್ಧಿ ಪಡೆದಿದ್ದಾರೆಂದು ಹಿರಿಯ ಕಾಂಗ್ರೆಸ್ ಧುರೀಣ, ವಾಲ್ಮೀಕಿ ಸಮಾಜದ ಪ್ರಮುಖ ರಾಮಣ್ಣ ಫಲದೊಡ್ಡಿ ಹೇಳಿದರು.

ಇಲ್ಲಿನ ಜೋಡ ಮಾರುತಿ ದೇವಾಲಯದ ಎದುರು ಶ್ರೀರಾಮ ಸೇನೆಯ ಆಶ್ರಯದಲ್ಲಿ ಜರುಗಿದ ಬೃಹತ್ ಶ್ರೀರಾಮ ಹಾಗೂ ವಾಲ್ಮೀಕಿ ಮೂರ್ತಿಗಳ ಮೆರವಣಿಗೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿ ಅಯೋಧ್ಯೆಯ ವಿಮಾನ ನಿಲ್ದಾಣಕ್ಕೆ ಮಹರ್ಷಿ ವಾಲ್ಮೀಕಿ ಹೆಸರು ನಾಮಕರಣ ಮಾಡಿದ್ದರಿಂದ ಮಹರ್ಷಿ ವಾಲ್ಮೀಕಿ ಹೆಸರು ಅಂತಾರಾಷ್ಟ್ರೀಯ ಮಟ್ಟಕ್ಕೆ ಬೆಳೆದಿದೆ. ಇದರಿಂದಾಗಿ ಭಾರತೀಯರಿಗಷ್ಟೇ ಪರಿಚಯವಿದ್ದ ಮಹರ್ಷಿ ವಾಲ್ಮೀಕಿ ಅಂತಾರಾಷ್ಟ್ರೀಯ ಮಟ್ಟದಲ್ಲಿಯೂ ಗುರುತಿಸುವಂತಾಗಿದೆ. ಈ ಕಾರ್ಯಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಮಸ್ತ ವಾಲ್ಮೀಕಿ ಸಮಾಜದಿಂದ ಅಭಿನಂದಿಸುವದಾಗಿ ಹೇಳಿದರು.



ಶ್ರೀರಾಮ ಸೇನೆಯ ರಾಜ್ಯ ಕಾರ್ಯದರ್ಶಿ ರಾಜೂ ಖಾನಪ್ಪನವರ ಮಾತನಾಡಿ, ದೇಶದಲ್ಲಿ ಹಿಂದೂ ಉಳಿದರೆ ಮಾತ್ರ ಹಿಂದೂ ಸಮಾಜ ಉಳಿಯಲಿದೆ. ಸ್ವಾತಂತ್ರ್ಯಾನಂತರ ಬಹುಕಾಲ ದೇಶವನ್ನಾಳಿದ ಕಾಂಗ್ರೆಸ್ ಪಕ್ಷದ ನಾಯಕರು ಅಯೋಧ್ಯೆ ವಿವಾದವನ್ನು ಜೀವಂತವಾಗಿರಿಸಿ, ತಮ್ಮ ಬೇಳೆ ಬೇಯಿಸಿಕೊಂಡಿದ್ದರು. ಪ್ರಭು ಶ್ರೀರಾಮನ ಆಶೀರ್ವಾದದಿಂದ ಶ್ರೀರಾಮ ಅಯೋಧ್ಯೆಯಲ್ಲಿಯೇ ಜನಿಸಿದ ಬಗ್ಗೆ ನೂರಾರು ಸಾಕ್ಷಿ-ಪುರಾವೆಗಳು ದೊರೆತ ನಂತರ, ನ್ಯಾಯಾಲಯ ರಾಮಜನ್ಮಭೂಮಿ ಟ್ರಸ್ಟ್ ಪರವಾಗಿ ಆದೇಶ ನೀಡಿತೆಂದು ಸ್ಮರಿಸಿದರು.

ಬಿಜೆಪಿಯ ಹಿರಿಯ ಧುರೀಣ, ಗದಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಶ್ರೀಕಾಂತ ಖಟವಟೆ, ವಿಠ್ಠಲ ಖಟವಟೆ ಮಾತನಾಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಫಕೀರಸಾ ಭಾಂಡಗೆ, ಪ್ರಶಾಂತ ನಾಯ್ಕರ, ಬಸವರಾಜ ಕುರುಗೋಡ, ಮಹಾಂತೇಶ ನಲವಡಿ, ನಾಗರಾಜ ತಳವಾರ, ಶ್ರೀರಾಮ ಸೇನೆಯ ಜಿಲ್ಲಾಧ್ಯಕ್ಷ ಸೋಮು ಗುಡಿ, ಬಸವರಾಜ ಕುರ್ತಕೋಟಿ, ಅಪ್ಪು ಧುಂಡಸಿ, ರವಿ ಮುಕ್ಕಣ್ಣವರ, ಹುಲಿಗೆಪ್ಪ ವಾಲ್ಮೀಕಿ, ಸತೀಶ ಕುಂಬಾರ, ಕಿರಣ ಹಿರೇಮಠ, ಮಲ್ಲು ಚಿಂಚಲಿ, ರಾಜೂ ಮುಧೋಳ, ವೆಂಕಟೇಶ ದೊಡ್ಡಮನಿ, ರವಿ ಕರಬಸಣ್ಣವರ, ಸುನೀಲ ಮುಳ್ಳಾಳ, ಶಿವಯೋಗಿ ಹಿರೇಮಠ, ಮೌನೇಶ ಚನ್ನದಾಸರ, ಮಹಾಬಲೇಶ ಶೆಟ್ಟರ ಮುಂತಾದವರಿದ್ದರು.

> ಇಡೀ ದೇಶ ಅಯೋಧ್ಯೆಯಲ್ಲಿ ರಾಮಲಲ್ಲಾ ಮೂರ್ತಿ ಪ್ರತಿಷ್ಠಾಪನೆ ಸಮಾರಂಭವನ್ನು ಕಣ್ತುಂಬಿಕೊಳ್ಳಲು ಅನುಕೂಲವಾಗುವಂತೆ ಕೇಂದ್ರ ಸರಕಾರ ಕಚೇರಿಗಳಿಗೆ ಅರ್ಧ ದಿನ ರಜೆ ನೀಡಿದೆ. ಕೇಂದ್ರ ಸರಕಾರಿ ಸ್ವಾಮ್ಯದ ಶಾಲೆ-ಕಾಲೇಜುಗಳಿಗೆ ರಜೆ ನೀಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜಕೀಯ ಕಾರಣಕ್ಕೆ ರಾಜ್ಯದಲ್ಲಿ ಸರಕಾರಿ ರಜೆ ಘೋಷಿಸದೇ ಹಿಂದೂ ವಿರೋಧಿ ನೀತಿಯನ್ನು ಅನುಸರಿಸಿದ್ದಾರೆ. ಮುಂದೊಂದು ದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಈ ಕೃತ್ಯಕ್ಕೆ ಪಶ್ಚಾತ್ತಾಪ ಪಡಬೇಕಾಗುತ್ತದೆ.
>
> **- ರಾಜೂ ಖಾನಪ್ಪನವರ.**
> ಶ್ರೀರಾಮ ಸೇನಾ ರಾಜ್ಯ ಕಾರ್ಯದರ್ಶಿ.

### ಪಟ್ಟಣ, ಗ್ರಾಮೀಣ ಪ್ರದೇಶದ ತುಂಬ ಹಬ್ಬದ ವಾತಾವರಣ | ಎಲ್ಲಡೆ ಕಂಗೊಳಿಸಿದ ಕೇಸರಿ

# ರಾಮ ಭಕ್ತಿಯಲ್ಲಿ ಪುನೀತವಾದ ಲಕ್ಷ್ಮೇಶ್ವರ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಯೋಧ್ಯೆಯಲ್ಲಿ ಪ್ರಭು ಶ್ರೀರಾಮನ ಮೂರ್ತಿ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಸೋಮವಾರ ಸಂಪೂರ್ಣ ತಾಲೂಕು ರಾಮಮಯವಾಗಿತ್ತು. ಎಲ್ಲೆಡೆ ಕೇಸರಿ ಪತಾಕೆಗಳು ಹಾರಾಡುತ್ತಿದ್ದರೆ, ರಾಮನಾಮ ಜಪ, ಘೋಷಣೆಗಳು ಮೊಳಗುತ್ತಿದ್ದವು. ಇಡೀ ಪಟ್ಟಣದಲ್ಲಿ ಎಲ್ಲಿ ನೋಡಿದಲ್ಲಿ ಹಬ್ಬದ ವಾತಾವರಣ ಕಂಡುಬಂದಿತು.

**ದೇವಸ್ಥಾನಗಳಲ್ಲಿ ಪೂಜೆ:** ಮುಂಜಾನೆಯಿಂದಲೇ ಎಲ್ಲ ದೇವಸ್ಥಾನಗಳಲ್ಲಿ ವಿಶೇಷವಾಗಿ ಮಾರುತಿ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಹೋಮ-ಹವನಗಳನ್ನು ಆಯೋಜಿಸಲಾಗಿತ್ತು. ಪರ್ವತ ಮಲ್ಲಯ್ಯನ ದೇವಸ್ಥಾನದ ಮೇಲೆ 104 ವರ್ಷ ವಯೋಮಾನದ ವೃದ್ಧೆ ಮಲ್ಲಮ್ಮ ಹಿರೇಮಠರಿಂದ ಭಗವಾಧ್ವಜ ಹಾರಿಸಲಾಯಿತು. ಬೇವಿನಮರದ ಓಣಿಯಲ್ಲಿ ಶಕ್ತಿ ದೇವತೆ ದೇವಾಲಯದಲ್ಲಿ ವಿಶೇಷ ಪೂಜೆ ಮತ್ತು ಸತ್ಯಾನಾರಾಯಣ ಪೂಜೆ ಹಮ್ಮಿಕೊಳ್ಳಲಾಗಿತ್ತು. ಇಡೀ ಓಣಿಯನ್ನು ಸೆಗಣಿಯಿಂದ ಸಾರಿಸಿ ಬಣ್ಣ ಬಣ್ಣದ ರಂಗೋಲಿ ಬಿಡಿಸಲಾಗಿತ್ತು. ಪಟ್ಟಣದ ಬಸ್ತಿಬಣ, ಹಾವಳಿ ಹನುಮಪ್ಪನ ದೇವಸ್ಥಾನ, ತಾಲ್ಲೂಕಿನ ಶಿಗ್ಲಿಯ ಶ್ರೀರಾಮನ ದೇವಾಲಯಗಳಲ್ಲೂ ವಿವಿಧ ಪೂಜೆಗಳು ನಡೆದವು.



**ಅನ್ನ ಸಂತರ್ಪಣೆ:** ಶ್ರೀರಾಮನ ಮೂರ್ತಿ ಪ್ರತಿಷ್ಠಾಪನೆ ನಿಮಿತ್ತ ತಾಲೂಕಿನಾದ್ಯಂತ ದೇವಸ್ಥಾನಗಳಲ್ಲಿ ಅನ್ನ ಪ್ರಸಾದದ ವಿತರಣೆ ನಡೆಯಿತು. ಪ್ರತಿಯೊಬ್ಬರೂ ಸ್ವಯಂಪ್ರೇರಿತರಾಗಿ ಅನ್ನ ಪ್ರಸಾದ ವಿತರಣೆಯ ವ್ಯವಸ್ಥೆ ಮಾಡಿದ್ದರು. ಅಲ್ಲಲ್ಲಿ ಪಾನಕ, ಕೋಸಂಬರಿ, ಶ್ರೀರಾಮನ ಪ್ರಸಾದ ವಿತರಣೆಗಳನ್ನು ಹಮ್ಮಿಕೊಳ್ಳಲಾಗಿತ್ತು.

**ಎಲ್ಲೆಡೆ ಕೇಸರಿಮಯ:** ಪಟ್ಟಣದ ಮೂಲೆ ಮೂಲೆಗಳಲ್ಲೂ ಪ್ರಭು ಶ್ರೀರಾಮನ ಭಾವಚಿತ್ರ ಇರುವ ಬ್ಯಾನರ್‌ಗಳು ರಾರಾಜಿಸುತ್ತಿದ್ದವು. ಪಟ್ಟಣದ ಎಲ್ಲ ಓಣಿಗಳಲ್ಲಿ ಬೃಹತ್ ಬ್ಯಾನರ್‌ಗಳನ್ನು, ಕೇಸರಿ ಧ್ವಜಗಳನ್ನು ಭಕ್ತರು ಅಳವಡಿಸಿದ್ದರು. ಅಲ್ಲದೆ ಅಯೋಧ್ಯೆಯಲ್ಲಿ ಪ್ರತಿಷ್ಠಾಪನೆಗೊಂಡ ಬಾಲ ರಾಮನ ಭಾವಚಿತ್ರದ ಕಟೌಟ್ ಮತ್ತು ಬ್ಯಾನರ್‌ಗಳಿಗೆ ಸಾರ್ವಜನಿಕರು ಕೈ ಮುಗಿದು ಭಕ್ತಿ ಸಮರ್ಪಿಸಿದರು. ಬಜಾರ, ಪುರಸಭೆ ರಸ್ತೆ, ಕೆಂಚಲಾಪುರ ರಸ್ತೆ ಸೇರಿದಂತೆ ಎಲ್ಲ ಪ್ರಮುಖ ರಸ್ತೆಗಳಲ್ಲಿ ಕೇಸರಿ ಬಣ್ಣದ ಬಂಟಿಂಗ್ಸ್‌ಗಳನ್ನು ಕಟ್ಟಿದ್ದರಿಂದ ಇಡೀ ಪಟ್ಟಣ ಕೇಸರಿ ಬಣ್ಣದಿಂದ ಕಂಗೊಳಿಸುತ್ತಿತ್ತು.

**ಬೈಕ್ ರ‍್ಯಾಲಿ:** ಶಾಸಕ ಡಾ.ಚಂದ್ರು ಲಮಾಣಿ ಬಿಜೆಪಿ ಕಾರ್ಯಕರ್ತರು ಸಂಘಟಿಸಿದ್ದ ಬೈಕ್ ರ‍್ಯಾಲಿಯಲ್ಲಿ ಭಾಗವಹಿಸಿದ್ದರು. ರ‍್ಯಾಲಿಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

> ಶ್ರೀರಾಮನ ಮೂರ್ತಿ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಸೋಮವಾರ ವಿವಿಧ ಹಿಂದೂಪರ ಸಂಘಟನೆಗಳು ಶ್ರೀರಾಮನ ಭಾವಚಿತ್ರದ ಮೆರವಣಿಗೆ ನಡೆಸಿದರು. ಕೆಂಚಲಾಪುರ ಓಣಿಯಿಂದ ಆರಂಭವಾದ ಮೆರವಣಿಗೆಯು ಹಾವಳಿ ಹನುಮಪ್ಪನ ದೇವಸ್ಥಾನದವರೆಗೆ ಸಂಚರಿಸಿತು. ಇಡೀ ಮೆರವಣಿಗೆ ತುಂಬ ಜೈ ಶ್ರೀರಾಮ ಘೋಷಣೆಗಳು ಮೊಳಗುತ್ತಿದ್ದವು. ಸಂಜೆ ದೀಪಾಲಂಕಾರ, ಪಟಾಕಿ ಸಿಡಿಸಿ, ಪಟ್ಟಣ ಹಾಗೂ ತಾಲೂಕಿನ ಗ್ರಾಮೀಣ ಪ್ರದೇಶಗಳ ಜನತೆ ಅಯೋಧ್ಯೆಯ ರಾಮಮಂದಿರ ಉದ್ಘಾಟನೆಯನ್ನು ಸಂಭ್ರಮಿಸಿದರು.



## ಅಂತಿಮ ಮತದಾರರ ಯಾದಿ ಪ್ರಕಟ

**■ವಿಜಯಸಾಕ್ಷಿ ಸುದ್ದಿ, ಗದಗ**

ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ 1-1-2024 ದಂದು ಅರ್ಹತಾ ದಿನಾಂಕವೆಂದು ಪರಿಗಣಿಸಿ ವಿಧಾನಸಭಾ ಕ್ಷೇತ್ರಗಳ ಮತದಾರರ ಯಾದಿಗಳನ್ನು ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯನ್ವಯ ಪರಿಷ್ಕರಿಸುವ ಬಗ್ಗೆ ಆಯೋಗವು ವೇಳಾಪಟ್ಟಿಯನ್ನು ಹೊರಡಿಸಿರುತ್ತಾರೆ.

ಈ ವೇಳಾಪಟ್ಟಿಯನ್ವಯ ಗದಗ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಾದ 65- ಶಿರಹಟ್ಟಿ (ಪ.ಜಾ) , 66-ಗದಗ , 67 ರೋಣ ಮತ್ತು 68-ನರಗುಂದ ನೇದ್ದವುಗಳಿಗೆ ಸಂಬಂಧಿಸಿದಂತೆ ಅಂತಿಮ ಮತದಾರರ ಯಾದಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ, ತಹಸೀಲ್ದಾರರ ಕಚೇರಿಗಳು ಹಾಗೂ ಮುಖ್ಯ ಚುನಾವಣಾಧಿಕಾರಿಗಳ ವೆಬ್ ಸೈಟ್ www.ceokarnataka.kar.nic.in ಹಾಗೂ https://gadag.nic.in ನೇದ್ದರಲ್ಲಿ ಪ್ರಕಟಿಸಲಾಗಿರುತ್ತದೆ ಹಾಗೂ ಸಂಬಂಧಪಟ್ಟ ಎಲ್ಲಾ ಮತಗಟ್ಟೆ ಮಟ್ಟದ ಅಧಿಕಾರಿಗಳ ಬಳಿ ಇರುತ್ತದೆ.

ಅಂತಿಮ ಮತದಾರರ ಪಟ್ಟಿಯಲ್ಲಿ ಸಾರ್ವಜನಿಕರು ತಮ್ಮ ಹೆಸರು ನೋಂದಣಿಯಾಗಿರುವ ಬಗ್ಗೆ ಹಾಗೂ ನೋಂದಣಿಯಾಗಿದ್ದಲ್ಲಿ ಸರಿ ಇರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬಹುದಾಗಿದೆ. ಒಂದು ವೇಳೆ ನ್ಯೂನತೆಗಳಿದ್ದಲ್ಲಿ ಕೂಡಲೇ ಸಂಬಂಧಪಟ್ಟ ನಮೂನೆಗಳಲ್ಲಿ ಅರ್ಜಿಗಳನ್ನು ಸಲ್ಲಿಸಿ ಸರಿಪಡಿಸಿಕೊಳ್ಳಬಹುದಾಗಿದೆ.

ಪ್ರಸ್ತುತ ಅಂತಿಮ ಮತದಾರ ಪಟ್ಟಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 4,39,603 ಪುರುಷ ಮತದಾರರು, 4,40,749 ಮಹಿಳಾ ಮತದಾರರು ಹಾಗೂ 62 ಇತರೆ ಮತದಾರರು ಹೀಗೆ ಒಟ್ಟು 8,80,414 ಮತದಾರರು ಕರಡು ಮತದಾರರ ಪಟ್ಟಿಯಲ್ಲಿ ಇದ್ದಾರೆ.

ಜಿಲ್ಲೆಯ ಒಟ್ಟು ಮತದಾರರ ಪೈಕಿ 23065 ಯುವ ಮತದಾರರು ಸೇರ್ಪಡೆಯಾಗಿರುತ್ತಾರೆ. ಈ ಪೈಕಿ 12089 ಪುರುಷ, 10975 ಮಹಿಳಾ ಮತ್ತು 01 ಇತರೆ ಮತದಾರರಿದ್ದಾರೆ. ಪ್ರಸ್ತುತ ಅಂತಿಮ ಮತದಾರ ಪಟ್ಟಿಯಲ್ಲಿ 11098 ವಿಶೇಷ ಚೇತನ ಮತದಾರರಿದ್ದು, ಈ ಪೈಕಿ 6592 ಪುರುಷ 4505 ಮಹಿಳಾ ಹಾಗೂ 01 ಇತರೆ ವಿಶೇಷ ಚೇತನ ಮತದಾರರಿದ್ದಾರೆ. ಮತದಾರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯ ಅವಧಿಯಲ್ಲಿ ಒಟ್ಟು 20890 ಮತದಾರರ ಹೆಸರನ್ನು ಕೈಬಿಡಲಾಗಿದೆ ಹಾಗೂ 26349 ಮತದಾರರ ಹೆಸರನ್ನು ಮತದಾರ ಪಟ್ಟಿಗೆ ಸೇರ್ಪಡೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಮಲಪ್ರಭಾ ಬಲದಂಡೆ ಕಾಲುವೆ ಪಾತ್ರದಲ್ಲಿನ ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ರೋಣ, ಗಜೇಂದ್ರಗಡ ಪುರಸಭೆ ವ್ಯಾಪ್ತಿಯ ಹಾಗೂ ನರೇಗಲ್ಲ ಪಟ್ಟಣ ಪಂಚಾಯತ್ ವ್ಯಾಪ್ತಿಯ ಹಾಗೂ ಅಸೂಟಿ ಮತ್ತು ಹೊಳೆಆಲೂರು ಗ್ರಾಮದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಜನವರಿ 22ರಂದು ಸಂಜೆ 4 ಗಂಟೆಯಿಂದ ಫೆಬ್ರುವರಿ 1ರವರೆಗೆ 10 ದಿನಗಳವರೆಗೆ ಪ್ರತಿದಿನ 1000 ಕ್ಯೂಸೆಕ್ಸ್ ನಂತೆ ಒಟ್ಟು 0.86 ಟಿಎಂಸಿ ನೀರನ್ನು ನವಿಲು ತೀರ್ಥ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆ ಮೂಲಕ ಜಿಗಳೂರು, ಅಸೂಟಿ, ಹೊಳೆ ಆಲೂರು ಗ್ರಾಮದ ಕೆರೆಗಳಿಗೆ ಕುಡಿಯುವ ನೀರನ್ನು ಹಲವು ಷರತ್ತಿಗೊಳಪಟ್ಟು ಬಿಡುಗಡೆಗೊಳಿಸುವಂತೆ ಆದೇಶಿಸಲಾಗಿದೆ.

ರೋಣ ತಾಲೂಕು ಜಿಗಳೂರು, ಅಸೂಟಿ ಮತ್ತು ಹೊಳೆ ಆಲೂರು ಕೆರೆಗೆ ಕುಡಿಯುವ ನೀರು ಬಿಡುಗಡೆ ಮಾಡುವ ಕಾರಣ ಮಲಪ್ರಭಾ ಬಲದಂಡೆ ಕಾಲುವೆಯ ಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದಾಗಲಿ, ದನಕರುಗಳನ್ನು ಇಳಿಸುವುದಾಗಲಿ, ಇತ್ಯಾದಿ ಚಟುವಟಿಕೆಗಾಗಿ ಕಾಲುವೆಗೆ ಇಳಿಯದಂತೆ ಎಚ್ಚರಿಕೆ ನೀಡುವುದರೊಂದಿಗೆ ಸದರಿ ಅವಧಿಯಲ್ಲಿ ರೈತ ಬಾಂಧವರು ಕಾಲುವೆಗುಂಟ ಅಳವಡಿಸಿರುವ ಪಂಪ್ ಸೆಟ್ ಗಳಿಂದ ನೀರೆತ್ತುವುದನ್ನು ಸಹ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

## ಶಾಸಕರಿಂದ ಸಿಸಿ ರಸ್ತೆ ನಿರ್ಮಾಣಕ್ಕೆ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರವಿವಾರ ಶಿರಹಟ್ಟಿ ತಾಲೂಕಿನ ಹೊಳಲಾಪೂರ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಲೋಕಸಭಾ ಸದಸ್ಯ ಶಿವಕುಮಾರ ಉದಾಸಿ ಅವರ 2022-23ನೇ ಸಾಲಿನ 5 ಲಕ್ಷ ರೂ ಹಾಗೂ ಶಾಸಕರ ಸ್ಥಳೀಯ ಅಭಿವೃದ್ಧಿ ಯೋಜನೆ ಅಡಿ 2 ಲಕ್ಷ ರೂ ಸೇರಿ ಒಟ್ಟೊ 7 ಲಕ್ಷ ರೂ ಅನುದಾನದಡಿಯಲ್ಲಿ ಸಿಸಿ ರಸ್ತೆ ನಿರ್ಮಾಣ ಕಾರ್ಯ ಕೈಗೊಳ್ಳಲಾಗುತ್ತಿದೆ. ಇದಕ್ಕೆ ಗ್ರಾಮಸ್ಥರು ಸಹಕಾರ ನೀಡಬೇಕು. ಹಂತ ಹಂತವಾಗಿ ಕ್ಷೇತ್ರದಾದ್ಯಂತ ಅಭಿವೃದ್ಧಿ ಕೆಲಸಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದರು.

ಗ್ರಾ.ಪಂ ಅಧ್ಯಕ್ಷ ಮೈಲಾರಪ್ಪ ಹಾದಿಮನಿ, ಬಿ.ಡಿ. ಪಲ್ಲೇದ, ಶೇಕಣ್ಣ ಕುರ್ತಕೋಟಿ, ಉಡಚಪ್ಪ ಕರಡಿ, ನೀಲನಗೌಡ ಪಾಟೀಲ, ನಿಂಗಪ್ಪ ಹುಚ್ಚಣ್ಣವರ, ಮೈಲಾರಪ್ಪ ಕರಡಿ, ಬಸವರಾಜ ಮತ್ತೂರ ಮುಂತಾದವರು ಉಪಸ್ಥಿತರಿದ್ದರು.



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿಯ ಹಿಮಾಲಯ ಯೋಗ ಕೇಂದ್ರದಲ್ಲಿ ಅಯೋಧ್ಯೆಯಲ್ಲಿ ಬಾಲರಾಮ ವಿಗ್ರಹ ಪ್ರತಿಷ್ಠಾಪನೆಯ ಅಂಗವಾಗಿ ಸೋಮವಾರ ವಿಶೇಷ ಯೋಗ ತರಬೇತಿ, ಮಕ್ಕಳಿಗೆ ರಾಮನಾಮ ಜಪದ ಮಹತ್ವವನ್ನು ತಿಳಿಸಿಕೊಡಲಾಯಿತು. ಯೋಗ ಕೇಂದ್ರದ ಸಂಚಾಲಕಿ ಮಂಜುಳಾ ಇಟಗಿ, ಮಕ್ಕಳಾದ ವಿನುತಾ ಹಾತಲಗೇರಿ, ಗಿರೀಶ್ ಹಾತಲಗೇರಿ, ಸಂಕೇತ್ ಹಾತಲಗೇರಿ, ಸ್ನೇಹ, ಸಿಂಧೂ ಹಿರೇಮಠ, ಪ್ರಜ್ವಲ್ ಹಿರೇಮಠ್, ವರ್ಷ, ಅನುಷಾ, ಹರ್ಷಿತ ಹಾವಿನಾಳ, ರಿಷಿತ್ ಹಾವಿನಾಳ, ನವ್ಯ ರಾಣಿ ಮೇಘಲಮನಿ, ಕಾವ್ಯ, ನಿಶಾ ಮೇಗಿಲ್ಮನಿ, ಕಾವೇರಿ ಮುಂತಾದವರಿದ್ದರು.

### ಮತದಾರರ ಅಂತಿಮ ಯಾದಿ ಪ್ರಕಟ

## ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ 1-1-2024 ರನ್ನು ಅರ್ಹತಾ ದಿನಾಂಕವೆಂದು ಪರಿಗಣಿಸಿ ವಿಧಾನಸಭಾ ಕ್ಷೇತ್ರಗಳ ಮತದಾರರ ಯಾದಿಗಳನ್ನು ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯನ್ವಯ ಪರಿಷ್ಕರಿಸುವ ಬಗ್ಗೆ ಆಯೋಗವು ವೇಳಾಪಟ್ಟಿ ಹೊರಡಿಸಿದೆ.

ಈ ಕುರಿತು ಸೋಮವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಸಭೆ ಜರುಗಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## 'ಸೂರ್ಯೋದಯ ಯೋಜನೆ'ಗೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅಯೋಧ್ಯೆಯ ರಾಮಮಂದಿರದಲ್ಲಿ ರಾಮಲಲ್ಲಾನ ಪ್ರಾಣ ಪ್ರತಿಷ್ಠಾಪನೆ ನಂತರ ಪ್ರಧಾನಿ ನರೇಂದ್ರ ಮೋದಿ ಅವರು 'ಸೂರ್ಯೋದಯ ಯೋಜನೆ' ಘೋಷಿಸಿದ್ದಾರೆ.

ರಾಮಲಲ್ಲಾನ ಪ್ರಾಣ ಪ್ರತಿಷ್ಠಾಪನೆ ಸಂದರ್ಭದಲ್ಲಿ ದೇಶವಾಸಿಗಳು ತಮ್ಮ ಮನೆಗಳ ಮೇಲ್ಛಾವಣಿಯ ಮೇಲೆ ಸೋಲಾರ್ ಪ್ಯಾನಲ್ ಹೊಂದಬೇಕೆಂಬ ಅವರ ಸಂಕಲ್ಪವನ್ನು ಮತ್ತಷ್ಟು ಬಲಪಡಿಸಲಾಗಿದೆ ಎಂದು ಅವರು ಹೇಳಿದರು.

### ಡಾ. ಮಹೇಶ ನಾಲವಾಡ ಪ್ರತಿಷ್ಠಾನದಿಂದ ವೀರನಾರಾಯಣ ದೇವಸ್ಥಾನದಲ್ಲಿ ವಿಶೇಷ ಪೂಜೆ

# ರಾಮ ಮಂದಿರ ದೇಶದ ಭವಿಷ್ಯಕ್ಕೆ ನಾಂದಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಭು ಶ್ರೀರಾಮ 500 ವರ್ಷದ ನಂತರ ತನ್ನ ಭವ್ಯ ಮಂದಿರದಲ್ಲಿ ಪುನಃ ಸ್ಥಾಪಿತನಾಗಿದ್ದಾನೆ. ದೇಶದ ಇತಿಹಾಸದಲ್ಲಿ ಅತ್ಯಂತ ಮಹತ್ವದ ದಿನವಾದ ಇಂದು ರಾಷ್ಟ್ರೀಯತೆ ಮತ್ತು ಸನಾತನ ಧರ್ಮವನ್ನು ಒಗ್ಗೂಡಿಸಿ ಮುನ್ನಡೆಸುವಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ. ಜಾತಿ, ಧರ್ಮ, ವರ್ಣ, ಭಾಷೆ, ಪ್ರದೇಶ ಎಲ್ಲವನ್ನೂ ಮರೆತು ಶ್ರೀರಾಮ ಭಕ್ತಿಯಲ್ಲಿ ಒಂದಾಗಿರುವದು ದೇಶದ ಉಜ್ವಲ ಭವಿಷ್ಯಕ್ಕೆ ನಾಂದಿ ಎಂದು ಡಾ. ಮಹೇಶ ನಾಲವಾಡ ಹೇಳಿದರು.

ಡಾ. ಮಹೇಶ ನಾಲವಾಡ ಪ್ರತಿಷ್ಠಾನದಿಂದ ಅಯೋಧ್ಯೆಯಲ್ಲಿ ಜರುಗಲಿರುವ ಶ್ರೀ ಬಾಲರಾಮ ಮೂರ್ತಿ ಪ್ರತಿಷ್ಠಾಪನೆ ಪ್ರಯುಕ್ತ ಗದುಗಿನ ವೀರನಾರಾಯಣ ದೇವಸ್ಥಾನದಲ್ಲಿ ಜರುಗಿದ ವಿವಿಧ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಿಜೆಪಿ ಮುಖಂಡ, ಕರಸೇವಕರಾದ ಶ್ರೀಕಾಂತ ಖಟವಟೆ ಮಾತನಾಡಿ, 1992ರಲ್ಲಿ ಗದುಗಿನಿಂದ ಆಯೋಧ್ಯೆಗೆ ಕರಸೇವೆವೆಗಾಗಿ ಹೋಗಿದ್ದ ನಾವು ಅಲ್ಲಿಂದ ಉಳಿದು ಬಂದಿರುವುದೇ ದೊಡ್ಡ ಚಮತ್ಕಾರ. ಇಂದು ಪ್ರಭು ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆಯನ್ನು ಕಂಡು ನಮ್ಮೆಲ್ಲಾ ಕರಸೇವಕರ ಜೀವನ



ಪಾವನವಾಯಿತು ಎಂದರು.

ದೇಶದ ಸಮಸ್ತ ಕರಸೇವಕರ ಪರವಾಗಿ ಗದುಗಿನ ಕರಸೇವಕರಾದ ಶ್ರೀಕಾಂತ ಖಟವಟೆ, ವಿಠ್ಠಲಸಾ ಭಾಂಡಗೆ, ಪ್ರಕಾಶ ಭಾಂಡಗೆ, ಬಸವರಾಜ ಗುಡಿಸಾಗರ, ರಾಮು ನಿಂಬಾಳಕರ, ಸುರೇಶ ಪವಾರ ಹಾಗೂ ಶ್ರೀಪತಿ ಉಡಪಿ ಇವರ ದೀರ್ಘ ಆಯುಷ್ಯ ಮತ್ತು ಆರೋಗ್ಯಕ್ಕಾಗಿ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ವಿಶೇಷ ಪೂಜೆ ಅರ್ಚನೆಯನ್ನು ಮಾಡಿಸಿ, ಡಾ. ಮಹೇಶ ನಾಲವಾಡ ಪ್ರತಿಷ್ಠಾನದ ವತಿಯಿಂದ ಸನ್ಮಾನಿಸಲಾಯಿತು.

ಮಹಿಳಾ ತಂಡಗಳಿಂದ ಶ್ರೀರಾಮನ ಭಜನೆ, ಪುಸ್ತಕ ಪ್ರದರ್ಶನ, ಶೋಭಾ ಯಾತ್ರೆಯೊಂದಿಗೆ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾಯಕ್ರಮ, ಸಂಜೆ ದೀಪೋತ್ಸವ ಜರುಗಿತು. ಗದಗ ಹಾಗೂ ಹಾವೇರಿ ಜಿಲ್ಲೆಯ ಪ್ರಮುಖ ಬಸ್ ನಿಲ್ದಾಣಗಳಲ್ಲಿ ಸುಮಾರು 18 ಸಾವಿರಕ್ಕಿಂತ ಹೆಚ್ಚು ಜನರಿಗೆ ಅನ್ನಪ್ರಸಾದವನ್ನು ಡಾ. ಮಹೇಶ ನಾಲವಾಡ ಪ್ರತಿಷ್ಠಾನದಿಂದ ವಿತರಿಸಲಾಯಿತು.

ಈ ಸಂದರ್ಭದಲ್ಲಿ ವೀರನಾರಾಯಣ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಡಾ. ಕುಶಾಲ ಗೋಡಖಿಂಡಿ, ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಈಶಣ್ಣ ಮುನವಳ್ಳಿ, ನಗರಸಭೆ ಸದಸ್ಯರಾದ ಮಹಾಂತೇಶ ನಲವಡಿ, ವಿನಾಯಕ ಮಾನವಿ, ಶ್ರೀಮತಿ ದಿಂಡೂರ, ಮಾಧೂಸಾ ಮೇರವಾಡೆ ಸೇರಿದಂತೆ ಪ್ರಮುಖರಾದ ಸುಧೀರ ಘೋರ್ಪಡೆ, ಬಸವರಾಜ ನಾಗಲಾಪುರ, ತೋಟೋಸಾ ಭಾಂಡಗೆ, ಕೆ.ಪಿ. ಕೋಟಿಗೌಡ್ರ ವಕೀಲರು, ರಾಜು ಹೊಂಗಲ, ಲಕ್ಷ್ಮಣಸಾ ರಾಜೋಳಿ, ಡಾ. ಸುಭಾಷ ಶಿವನಗೌಡ್ರ, ವಿಜಯಲಕ್ಷ್ಮಿ ಮಾನವಿ, ಮುತ್ತು ಮುಳ್ಳಿಪಾಟೀಲ, ವಿಶ್ವನಾಥ ಹಳ್ಳಿಕೇರಿ, ಪ್ರತಿಷ್ಠಾನದ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

> ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮೂಲಕ ಕೋಟ್ಯಾಂತರ ಭಾರತೀಯರ ಕನಸಾದ ಪ್ರಭು ಶ್ರೀರಾಮನ ಪ್ರತಿಷ್ಠಾಪನೆ ನನಸಾಗಿರುವುದು ಹೆಮ್ಮೆಯ ವಿಷಯವಾಗಿದೆ. ಇದಕ್ಕಾಗಿ ಮನೆ, ಮಠ, ಪ್ರಾಣದ ಹಂಗು ತೊರೆದು ಹೋರಾಡಿದ ಮಹಾನ್ ಕರಸೇವಕರನ್ನು ಈ ಪುಣ್ಯ ದಿನದಂದು ಸನ್ಮಾನಿಸುತ್ತಿರುವುದು ನನ್ನ ಹಾಗೂ ಪ್ರತಿಷ್ಠಾನದ ಪುಣ್ಯವಾಗಿದೆ ಎಂದು ಡಾ.ಮಹೇಶ ನಾಲವಾಡ ನುಡಿದರು.

### ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿ ಸೂಚನೆ

# ಬರ ನಿರ್ವಹಣೆಯನ್ನು ಸಮರ್ಪಕವಾಗಿ ನಿಭಾಯಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರು ಮೇವಿನ ಸ್ಥಿತಿಗತಿಯ ಜೊತೆ-ಗೆ ಬರನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಛೇರಿಯ ಸಭಾಂಗಣದಲ್ಲಿ ಸೋಮವಾರ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು, ಮೇವಿನ ಸ್ಥಿತಿಗತಿ ಮತ್ತು ಬರನಿರ್ವಹಣೆ ಸಂಬಂಧಿಸಿದಂತೆ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಅಧಿಕಾರಿ ವರ್ಗ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರಿನ ತೊಂದರೆಗೊಳಗಾದ ಗ್ರಾಮಗಳನ್ನು ಈಗಾಗಲೇ ಗುರುತಿಸಿದ್ದು, ಯಾವುದೇ ಕಾರಣಕ್ಕೂ ಜಿಲ್ಲೆಯ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದ-ರೆಯಾಗದಂತೆ ಮುಂಜಾಗ್ರತಾ ಕ್ರಮ ಜರುಗಿಸಬೇಕೆಂದರು.



ಅಗತ್ಯ ಬಿದ್ದಲ್ಲಿ ಟ್ಯಾಂಕರ್ ಹಾಗೂ ಖಾಸಗಿ ಬೋರ್‌ವೆಲ್‌ಗಳ ಸಹಾಯದ ಮೂಲಕ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಮೇವು ಬ್ಯಾಂಕ್‌ಗಳಲ್ಲಿ ಸಮರ್ಪಕ ಮೇವಿನ ದಾಸ್ತಾನು ಮಾಡಿಟ್ಟುಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಭೆಯಲ್ಲಿ ಆದೇಶಿಸಿದರು.

ರೋಣ ತಾಲೂಕಿನ ಜಿಗಳೂರು, ಅಸೂಟಿ ಮತ್ತು ಹೊಳೆಆಲೂರು ಕೆರೆಗಳಲ್ಲಿ ಕುಡಿಯುವ ಉದ್ದೇಶಕ್ಕಾಗಿ ನವಿಲುತೀರ್ಥ ಜಲಾಶಯದ ನೀರು ಸಂಗ್ರಹಿಸಬೇಕು. ಈ ಬಗ್ಗೆ ತಾಲೂಕಿನ ತಹಸೀಲ್ದಾರರು ಹಾಗೂ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ನಿಗಾ ವಹಿಸುವಂತೆ ಹೇಳಿದರು.

ಪ್ರಸ್ತುತ ಜಲಾಶಯಗಳಲ್ಲಿ ಹಿಂದಿನ ವರ್ಷಕ್ಕಿಂತ ನೀರಿನ ಪ್ರಮಾಣ ಕಡಿಮೆ ಇದ್ದು ಮುಂದಿನ ದಿನಗಳಲ್ಲಿ ನೀರಿನ ಬೇಡಿಕೆ ಹೆಚ್ಚಾಗುವ ಸಾಧ್ಯತೆಯನ್ನು ಮನಗಂಡು, ಈಗ ಹರಿಬಿಡಲಾಗುವ ನೀರನ್ನು ಪೋಲಾಗದಂತೆ ಸಂಗ್ರಹಿಸಿಕೊಂಡು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸಲು ಕ್ರಮ ವಹಿಸಬೇಕು. ಹೆಸ್ಕಾಂ ಅಧಿಕಾರಿಗಳು ನೀರು ಬಿಡುವ ದಿನಗಳಲ್ಲಿ ಕಾಲುವೆಗುಂಟ ಅಳವಡಿಸಿರುವ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವ ಮೂಲಕ ರೈತರು ಬೆಳೆಗಳಿಗೆ ನೀರು ಬಳಸದಂತೆ ಜಾಗ್ರತೆ ವಹಿಸಬೇಕು ಎಂದರು.

ತಾಲೂಕಾವಾರು ತಹಸೀಲ್ದಾರರು ಪ್ರತಿ ಹದಿನೈದು ದಿನಕ್ಕೊಮ್ಮೆ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಗಳನ್ನು ನಡೆಸಿ ಮುಂಜಾಗ್ರತಾ ಕ್ರಮಗಳನ್ನು ವಹಿಸಿದ ಬಗ್ಗೆ ಕಚೇರಿಗೆ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಧಿಕಾರಿ ಡಾ.ವೆಂಕಟೇಶ್ ನಾಯಕ್, ಕೃಷಿ ಜಂಟಿ ನಿರ್ದೇಶಕಿ ತಾರಾಮಣಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟೆಮನಿ, ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗಣ್ಣವರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ, ಪಿ.ಆರ್.ಇ.ಡಿ. ಕಾರ್ಯಪಾಲಕ ಅಭಿಯಂತರ ಎಸ್.ಆರ್. ಗೌಡರ, ತಾಲ್ಲೂಕಾ ತಹಸೀಲದಾರರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಜ. 22ರಿಂದ ಫೆ. 1ರವರೆಗೆ ನವಿಲುತೀರ್ಥ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆಯ ಮೂಲಕ ನೀರು ಬಿಡುಗಡೆ-ಯಾಗುತ್ತಿದೆ. ಕಾಲುವೆಯ ಪಾತ್ರದಲ್ಲಿ ಜನ-ಜಾನುವಾರುಗಳನ್ನು ಬಿಡದಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳಲು ಸಂಬಂಧಿತ ತಹಸೀಲ್ದಾರರಿಗೆ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ನೀರು ಬಿಡುತ್ತಿರುವುದು ಕೇವಲ ಕುಡಿಯುವ ಉದ್ದೇಶಕ್ಕಾಗಿ ಮಾತ್ರ. ಕಾಲುವೆ ಪಾತ್ರದಲ್ಲಿರುವ ರೈತ ಬಾಂಧವರು ಪಂಪ್‌ಸೆಟ್‌ಗಳ ಮೂಲಕ ನೀರೆತ್ತಿ ಬೆಳೆಗಳಿಗೆ ಹಾಯಿಸಬಾರದು. ಈ ಕುರಿತು ತಹಸೀಲ್ದಾರರು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

## ಕರಸೇವಕರಿಗೆ ಸನ್ಮಾನ, ಅನ್ನಸಂತರ್ಪಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಅಯೋಧ್ಯೆಯ ಶ್ರೀರಾಮ ಮಂದಿರದಲ್ಲಿ ಶ್ರೀ ಬಾಲರಾಮನ ನೂತನ ವಿಗ್ರಹ ಪ್ರಾಣ ಪ್ರತಿಷ್ಠಾಪನೆಯ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್ ಸೋಮವಾರ ಗದಗ ಕಾಟನ್ ಮಾರ್ಕೆಟ್ ವೀರಶೈವ ಲೈಬ್ರರಿ ಬಳಿಯ ಮಾರುತಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಪ್ರಾರ್ಥನೆ, ಸನ್ಮಾನ, ಅನ್ನಸಂತರ್ಪಣೆ ಏರ್ಪಡಿಸಿತ್ತು.

ರಾಮ ವಿಜಯ ಮಹಾ ಮಂತ್ರ, ಹನುಮಾನ್ ಚಾಲೀಸಾ, ಸುಂದರಕಾಂಡ ಪಾರಾಯಣ, ರಾಮರಕ್ಷಾ ಸ್ತೋತ್ರ ಪಠಣ ಮಾಡಲಾಯಿತು. ಪ್ರತಿಷ್ಠಾಪನೆಯ ನಂತರ ಶಂಖನಾದ ಮತ್ತು ಘಂಟಾನಾದದೊಂದಿಗೆ ಆರತಿ ಮತ್ತು ಪ್ರಸಾದ ವಿತರಣೆಯನ್ನು ಶೃದ್ಧಾ ಭಕ್ತಿಯಿಂದ ನೆರವೇರಿಸಲಾಯಿತು.

ಇದೇ ಸಂದರ್ಭದಲ್ಲಿ ಅಯೋಧ್ಯೆಗೆ ತೆರಳಿ ಶ್ರೀರಾಮ ಮಂದಿರ ನಿರ್ಮಾಣಗೊಳ್ಳಲು ಕರಸೇವೆಗೈದ ಬಿಜೆಪಿ-ವ್ಹಿಎಚ್‌ಪಿ ಧುರೀಣರಾದ ಶ್ರೀಕಾಂತ ಖಟವಟೆ, ಶ್ರೀಪತಿ ಉಡುಪಿ, ಪ್ರಕಾಶ ಭಾಂಡಗೆ, ರಾಮು ನಿಂಬಾಳಕರ್, ಸುರೇಶ ಪವಾರ, ವಿಠ್ಠಲ ಭಾಂಡಗೆ, ಬಸವರಾಜ ಗುಡಿಸಾಗರ, ವಿಠ್ಠಲ ಮೇರವಾಡೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಗಣ್ಯ ವರ್ತಕರಾದ ಸಿದ್ಧಲಿಂಗಪ್ಪ ಫಕ್ಕೀರಪ್ಪ ಮಲ್ಲಾಡದ, ವಿನಾಯಕ ಅಬ್ಬಿಗೇರಿ, ನಗರಸಭಾ ಸದಸ್ಯೆ ಹುಲಿಗೆಮ್ಮ ಹಬೀಬ, ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ, ಪ್ರವೀಣ ಬನ್ಸಾಲಿ, ಬಸವರಾಜ ಕುರಗೋಡ, ಸುಂದರ ವಾಲ್ಮೀಕಿ, ಕಾಂತಿಲಾಲ ಬನ್ಸಾಲಿ, ಗಣೇಶ ಚವ್ಹಾಣ, ಮಾರುತಿ ಪವಾರ, ಶಂಕರ ಮಿರಜಕರ, ಸುರೇಶ ಮೇದಾರ, ಮುಖೇಶ ಸಂಕಲೇಚಾ, ಶಾವಲ್‌ಚಂದ ಮಾಳಿ, ಗಣೇಶ ಲದವಾ, ಹೊಸಮಠ, ಅಬ್ಬಿಗೇರಿ ಹಾಗೂ ಜೈನ್ ಸಮುದಾಯದವರು ಪಾಲ್ಗೊಂಡಿದ್ದರು.

# ಆರಾಧನೆ ವೀಕ್ಷಿಸಿದ ರಾಮ ಬಂಟ!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

'ಎಲ್ಲಿ ರಾಮನೋ ಅಲ್ಲಿ ಹನುಮನು' ಎಂಬ ಮಾತನ್ನು ಸಾಕ್ಷೀಕರಿಸುವಂತೆ ಲಕ್ಷ್ಮೇಶ್ವರದ ಸೋಮೇಶ್ವರ ದೇವಸ್ಥಾನದಲ್ಲಿ ರಾಮಮಂದಿರ ಲೋಕಾರ್ಪಣೆ, ರಾಮನ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ದಿನದ ಅಂಗವಾಗಿ ಗದಗ ಯೋಗ ತಂಡದಿಂದ ದೇವಸ್ಥಾನದಲ್ಲಿ ಅಗ್ನಿಹೋತ್ರ ಹೋಮ ಆಯೋಜನೆಗೊಂಡಿತ್ತು.

ದೇವಸ್ಥಾನದ ಪ್ರಾಂಗಣದಲ್ಲಿ ಶ್ರೀರಾಮ ಹಾಗೂ ಹನುಮಂತ ದೇವರ ಪೂಜೆ, ಹೋಮ-ಹವನ ನಡೆಯುತ್ತಿತ್ತು. ಈ ವೇಳೆ ಪೂಜೆಗೆ ಆಗಮಿಸಿದ ವಾನರ ರೂಪಿ (ಮಂಗ) ಬಹಳ ಸಮಯ ಯಜ್ಞ ಕುಂಡದ ಬಳಿ ಕುಳಿತು ಯಜ್ಞವನ್ನು ವೀಕ್ಷಿಸಿತು. ಸುತ್ತಲೂ ಜನ ಕೂತಿದ್ದರೂ ಯಾಗ ಸ್ಥಳಕ್ಕೆ ಬಂದ ಕೋತಿ ಅಂಜದೇ ಅಲ್ಲಿದ್ದ ದೀಪ, ಹೋಮ ಸಾಮಗ್ರಿಗಳನ್ನ ಮುಟ್ಟಿತು. ಹೋಮ ಕುಂಡದ ಪಕ್ಕದಲ್ಲಿ ಕುಳಿತ ಹನುಮ ಅಲ್ಲಿದ್ದ ದೀಪವನ್ನು ಹಿಡಿದುಕೊಂಡಿತು. ಅದನ್ನು ತೆಗೆದು ಮತ್ತೊಂದು ದಿಕ್ಕಿನಲ್ಲಿ ಇಟ್ಟರೆ ಅಲ್ಲಿಗೂ ಹೋಗಿ ಕುಳಿತುಕೊಂಡಿತು ಹೋಮ ಮುಗಿಯುವವರೆಗೂ ವಾನರ ಅಲ್ಲಿಯೇ ಇದ್ದು ರಾಮಭಕ್ತರಲ್ಲಿ ಅಚ್ಚರಿ ಮೂಡಿಸಿತು.



ಶ್ರೀರಾಮನ ಆರಾಧನಾ ಕಾರ್ಯಕ್ರಮಕ್ಕೆ ರಾಮನ ಬಂಟ ಹನುಮಂತನೇ ಆಗಮಿಸಿದ್ದಾನೆ ಎಂದು ಭಕ್ತರು ಶ್ರದ್ಧಾ ಭಕ್ತಿಯಿಂದ ಕೈಮುಗಿದರು.

# ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಯೋಧ್ಯೆಯಲ್ಲಿ ಶ್ರೀರಾಮ ಪ್ರಾಣಪ್ರತಿಷ್ಠಾಪನೆಯ ನಿಮಿತ್ತ ಇಲ್ಲಿನ ವಾರ್ಡ್ ನಂ.13ರ ರೇಲ್ವೆ ಕ್ವಾಟ್ರಸ್‌ನ ಗಣಪತಿ ದೇವಸ್ಥಾನದ ಆವರಣದಲ್ಲಿ ನಗರಸಭೆ ಸದಸ್ಯ ಮತ್ತು ಮುಶಿಗೇರಿ, ಶೃತಿ ಮುಶಿಗೇರಿ ದಂಪತಿಗಳ ನೇತೃತ್ವದಲ್ಲಿ ಪಾದಯಾತ್ರೆ, ವಿಶೇಷ ಪೂಜೆ ನೆರವೇರಿಸಲಾಯಿತು.



ಕಾರ್ಯಕ್ರಮದಲ್ಲಿ ಡಾ. ಶೇಖರ ಸಜ್ಜನರ, ಹಿರಿಯ ಮುಖಂಡರಾದ ಗುರುರಾಜ ತಿಲ್ಲಿಹಾಳ, ನಾಗರಾಜ ಉಮಚಗಿ, ರಾಜು ಕೊಣ್ಣೂರ, ವಿಜಯಕುಮಾರ ಹಿರೇಮಠ, ಈಶ್ವರ ಬಂಟೂರ, ಸಂತೋಷ ಗೌಳಿ, ಅಭಿಷೇಕ, ಆಕಾಶ ತಿಲ್ಲಿಹಾಳ ಸೇರಿದಂತೆ ವಾರ್ಡಿನ ಎಲ್ಲ ಮಹಿಳೆಯರು, ಶ್ರೀರಾಮ ಭಕ್ತರು ಉತ್ಸಾಹದಿಂದ ಪಾಲ್ಗೊಂಡು ಸಂಭ್ರಮಿಸಿದರು.


## ಪಟ್ಟಣ ಪಂಚಾಯತ ಕಾರ್ಯಾಲಯ, ನರೇಗಲ್ಲ-582119

ನಂ:ಪಪಂನ/ಅಲ್ಪಾವಧಿ/ಇ-ಟೆಂಡರ/ವಹಿ/2023-24 ದಿನಾಂಕ : 22-01-2024

### ಅಲ್ಪಾವಧಿ ಇ-ಟೆಂಡರ ಪ್ರಕಟಣೆ

ನರೇಗಲ್ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ನರೇಗಲ್ ಇವರು ಕರ್ನಾಟಕ ರಾಜ್ಯಪಾಲರ ಪರವಾಗಿ ಕರ್ನಾಟಕ ಪಾರದರ್ಶಕತೆ ಸಾರ್ವಜನಿಕ ಸಂಗ್ರಹಣೆ ಅಧಿನಿಯಮ 2000 ರನ್ವಯ ಕೆ.ಡಬ್ಲ್ಯೂ-1 ರ ನಿಯಮಾವಳಿಗಳಂತೆ ಈ ಕೆಳಕಂಡ ಕಾಮಗಾರಿಗಳಿಗೆ ಕರ್ನಾಟಕ ಸರ್ಕಾರದ ಇ-ಪ್ರಕ್ಯೂರಮೆಂಟ್ ಪೋರ್ಟಲ್ ಮೂಲಕ https://kppp.karnataka.gov.in ನಲ್ಲಿ ಪಿ.ಡಬ್ಲ್ಯೂಡಿ ಯಲ್ಲಿ ನೊಂದಣಿ ಮಾಡಿದ ಅರ್ಹ ಟೆಂಡರ್‌ದಾರರಿಂದ ಟೆಂಡರನ್ನು ಆಹ್ವಾನಿಸಲಾಗಿದೆ. ಟೆಂಡರ ಫಾರಂ ಹಾಗೂ ಇ.ಎಂ.ಡಿ ಮೊತ್ತವನ್ನು ಇ-ಪ್ರಕ್ಯೂರಮೆಂಟ್ ಪೋರ್ಟನಲ್ಲಿ ಸೂಚಿಸಲಾಗಿದೆ.

| SL | SCHEME | AMOUNT | INDENTS | CATEGORY |
|---|---|---|---|---|
| 1 | 15TH FINANCE UNTIED 2023-24 | 10.00 | 12705 | OTHERS |
| 2 | 15TH FINANCE UNTIED 2023-24 | 7.00 | 12739 | OTHERS |
| 3 | SFC UNTIED 2023-24 | 19.04 | T12730 | OTHERS |
| 4 | 15TH FINANCE UNTIED 2023-24 | 10.00 | 12715 | OTHERS |
| 5 | 15TH FINANCE UNTIED 2023-24 | 16.00 | 12684 | SC |
| 6 | 15TH FINANCE UNTIED 2023-24 | 11.00 | 12679 | OTHERS |
| 7 | 15TH FINANCE TIED 2023-24 AND 2021-22 15TH FINANCE NMPC | 10.00 | 12700 | OTHERS |
| 8 | SFC 7.25% 2023-24 | 0.80 | 12839 | OTHERS |
| 9 | SFC SCSP 2023-24 | 3.64 | 12840 | OTHERS |
| 10 | SFC TSP 2023-24 | 1.40 | 12917 | ST |
| 11 | 15TH TIDE FINANCE 2023-24 | 3.00 | 12842 | SC |
| 12 | SFC DRNK 1ST INST 2023-24 | 1.25 | 12916 | OTHERS |
| | **Below Indents 2ND CALL** | | | |
| 13 | SBM 2.0 2023-24SENT FOR DTS | 11.49 | 9633/CALL-2 | OTHERS |
| 14 | SBM 2.0 2023-24SENT FOR DTS | 3.75 | 9671/CALL-2 | OTHERS |
| 15 | SBM 2.0 2023-24 | 12.50 | 9580/CALL-2 | OTHERS |
| 16 | SBM 2.0 2023-24 | 12.10 | 9673/CALL-2 | |
| 17 | 15th FINANCE 2021-22 | 8.50 | 4397/CALL-2 | OTHERS |
| 18 | 15th FINANCE 2020-21 | 16.12 | 1487 | OTHERS |
| | **2ND CALL** | | | |
| 19 | SCSP 2022-23 | 1.00 | 12835 (CALL-2) | OTHERS |
| 20 | SFC DRINKIG WATER 2021-22 | 2.50 | 12883(CALL-2) | OTHERS |
| 21 | 2020-21 15th FIANCE | 2.00 | 12885 (ST CALL-2) | ST |

(1) ಟೆಂಡರಗಳನ್ನು ಆನಲೈನ್‌ನಲ್ಲಿ ಇ-ಪ್ರಕ್ಯೂರಮೆಂಟ್ ಪೋರ್ಟಲ ಮೂಲಕ ಸಲ್ಲಿಸಲು ಕೊನೆಯ ದಿನಾಂಕ : **02-02-2024** ಸಂಜೆ 5.30 ಘಂಟೆಯವರೆಗೆ (2) ಟೆಂಡರಗಳನ್ನು ಇ-ಪ್ರಕ್ಯೂರಮೆಂಟ್ ಪೋರ್ಟಲ್ ಮಾರ್ಗಸೂಚಿಗಳಂತೆ ದಿನಾಂಕ : **05-02-2024** ಬೆಳಿಗ್ಗೆ ತೆರೆಯಲಾಗುವುದು. (3) ಟೆಂಡರಗಳನ್ನು ಇ-ಪ್ರಕ್ಯೂರಮೆಂಟ್ ಪೋರ್ಟಲ್ ಮಾರ್ಗಸೂಚಿಗಳಂತೆ ದಿನಾಂಕ : **07-02-2024** ಬೆಳಿಗ್ಗೆ ತೆರೆಯಲಾಗುವುದು. (4) ಪ್ಯಾಕೇಜ್ ವಿವರಗಳು, ಟೆಂಡರ ಷರತ್ತುಗಳು ಹಾಗೂ ನಿಬಂಧನೆಗಳಿಗಾಗಿ ಕಛೇರಿ ವೇಳೆಯಲ್ಲಿ ತಾಂತ್ರೀಕ ವಿಭಾಗದಲ್ಲಿ ಪಡೆಯಬಹುದಾಗಿದೆ. (5) ಕಾಮಗಾರಿ ಪೂರ್ಣಗೊಳಿಸಲು ನಿಗಧಿಗೊಳಿಸಿರುವ ಕಾಲಾವಧಿ (ಮಳೆಗಾಲ ಸೇರಿ): 4 ತಿಂಗಳು. (6) As Per Govt. Order No. PWD65RDF2017 Date : 11-10-2018 ರನ್ವಯ ಶೇಕಡಾ 18% ರಷ್ಟು ಜಿ.ಎಸ್.ಟಿ ಗುತ್ತಿಗೆದಾರರಿಗೆ ಪ್ರತ್ಯೇಕವಾಗಿ ಪಾವತಿಸಲಾಗುವುದು. (7) ಪಟ್ಟಣ ಪಂಚಾಯತ ನರೇಗಲ್ಲ ಟೆಂಡರನ್ನು ಮಂಜೂರಿಸುವ ಅಥವಾ ತಿರಸ್ಕರಿಸುವ ಅಧಿಕಾರವನ್ನು ಕಾಯ್ದಿರಿಸಿಕೊಂಡಿದೆ.

**ಸಹಿ/- ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ನರೇಗಲ್**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/480/2023-24

**ಸಹಿ/- ಆಡಳಿತಾಧಿಕಾರಿಗಳು, ಪಟ್ಟಣ ಪಂಚಾಯತ ನರೇಗಲ್**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka